ಸಂಪುಟ: 11 ಸಂಚಿಕೆ: 208 ಪುಟಗಳು: 4+2 ಬೆಲೆ: ₹ 3.00 ಬುಧವಾರ, ಸೆಪ್ಟೆಂಬರ್ 23, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 208 Pages : 4+2 Rate : 3.00 Wednesday, September 23, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

### ಮೂರು ತಿಂಗಳ ನಿರಂತರ ಹೋರಾಟದ ಬಳಿಕ ಗದಗ ತಾಲೂಕು 'ಮಧ್ಯಮ ಬರ' ಘೋಷಣೆ- ಅಸಮಾಧಾನ

# GEN-Z ಹೋರಾಟಕ್ಕೆ ಮೊದಲ ಜಯ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕೆಂದು ಕಳೆದ ಮೂರು ತಿಂಗಳಿಂದ ನಿರಂತರ ಹೋರಾಟ ನಡೆಸಿದ್ದ GEN-Z ಯುವಕರು, ರೈತರು, ಮಹಿಳೆಯರು ಹಾಗೂ ನಾಗರಿಕರ ಹೋರಾಟಕ್ಕೆ ಮೊದಲ ಹಂತದ ಜಯ ಸಿಕ್ಕಿದೆ. ರಾಜ್ಯ ಸರ್ಕಾರ ಗದಗ ತಾಲೂಕನ್ನು ಮಧ್ಯಮ ಬರಪೀಡಿತ ತಾಲೂಕು ಎಂದು ಘೋಷಿಸಿರುವುದನ್ನು ಹೋರಾಟಗಾರರು ಸ್ವಾಗತಿಸಿದ್ದಾರೆ. ಆದರೆ, ಗದಗ ತಾಲೂಕಿನ ವಾಸ್ತವ ಪರಿಸ್ಥಿತಿಯನ್ನು ಪರಿಗಣಿಸಿ ಸಂಪೂರ್ಣ ಬರಗಾಲ ಪೀಡಿತ ತಾಲೂಕು ಎಂದು ಘೋಷಿಸಬೇಕು. ಇಲ್ಲವಾದರೆ ಮುಂದಿನ ಹಂತದಲ್ಲಿ ಮತ್ತೆ ಹೋರಾಟಕ್ಕೆ ಇಳಿಯುವುದಾಗಿ ಎಚ್ಚರಿಸಿದ್ದಾರೆ.

ಮಳೆ ಕೊರತೆಯಿಂದ ಬೆಳೆಹಾನಿ, ಅಂತರ್ಜಲ ಮಟ್ಟ ಕುಸಿತ, ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಸಮಸ್ಯೆಯಿಂದ ತಾಲೂಕಿನ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಈ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತರುವ ಉದ್ದೇಶದಿಂದ GEN-Z ಮತದಾರರು ಮತ್ತು ನಾಗರಿಕರ ವೇದಿಕೆಯ ನೇತೃತ್ವದಲ್ಲಿ ಯುವಕರು, ಮಹಿಳೆಯರು, ರೈತರು ಹಾಗೂ ನಾಗರಿಕರು ಯಾವುದೇ ರಾಜಕೀಯ ಅಥವಾ ವೈಯಕ್ತಿಕ ಸ್ವಾರ್ಥವಿಲ್ಲದೆ ಹೋರಾಟ ನಡೆಸಿದ್ದರು.





> "ಮೂರು ತಿಂಗಳ ಹೋರಾಟಕ್ಕೆ ಸ್ಪಂದಿಸಿ ಗದಗ ತಾಲೂಕನ್ನು ಬರಪೀಡಿತ ಎಂದು ಘೋಷಿಸಿರುವುದು ಸ್ವಾಗತಾರ್ಹ. ಆದರೆ ವಾಸ್ತವ ಪರಿಸ್ಥಿತಿಗೆ ಅನುಗುಣವಾಗಿ ಕೇವಲ ಮಧ್ಯಮ ಬರ ಎಂದು ಘೋಷಿಸಿರುವುದು ಸಮರ್ಪಕವಲ್ಲ. ಗದಗವನ್ನು ಸಂಪೂರ್ಣ ಬರಗಾಲ ಪೀಡಿತ ಎಂದು ಘೋಷಿಸಿ ರೈತರಿಗೆ ತಕ್ಷಣ ಪರಿಹಾರ ನೀಡಬೇಕು. ಬೇಡಿಕೆ ಈಡೇರದಿದ್ದರೆ ಮತ್ತೆ ಹೋರಾಟಕ್ಕೆ ಇಳಿಯುವುದು ಅನಿವಾರ್ಯ."
>
> – ಅನಿಲ ಮೆಣಸಿನಕಾಯಿ, ಬಿಜೆಪಿ ಪರಾಜಿತ ಅಭ್ಯರ್ಥಿ

ಹೋರಾಟದ ಭಾಗವಾಗಿ ರಕ್ತ ಸಹಿ ಅಭಿಯಾನ, ಮನವಿ ಪತ್ರ ಸಲ್ಲಿಕೆ, ಪಾದಯಾತ್ರೆ, ಪ್ರತಿಭಟನೆ, ಸಾರ್ವಜನಿಕ ಸಭೆಗಳು, ಗ್ರಾಮ ಮತ್ತು ವಾರ್ಡ್ ಮಟ್ಟದ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಸಾಮಾಜಿಕ ಜಾಲತಾಣಗಳ ಮೂಲಕವೂ ಸರ್ಕಾರದ ಗಮನ ಸೆಳೆಯಲಾಗಿತ್ತು. ಬಿಸಿಲು, ಮಳೆ ಹಾಗೂ ಹಲವು ಅಡೆತಡೆಗಳ ನಡುವೆಯೂ ಹೋರಾಟಗಾರರು ತಮ್ಮ ಬೇಡಿಕೆಯಿಂದ ಹಿಂದೆ ಸರಿಯದೆ ಹೋರಾಟ ಮುಂದುವರಿಸಿದ್ದರು. ವಿಶೇಷವಾಗಿ ರೈತರು, ಮಹಿಳೆಯರು ಹಾಗೂ ಯುವಕರು ಸ್ವಯಂಪ್ರೇರಣೆಯಿಂದ ರಕ್ತದಿಂದ ಸಹಿ ಮಾಡಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು.

ಸರ್ಕಾರದ ಬರ ಘೋಷಣೆಯನ್ನು ಸ್ವಾಗತಿಸಿರುವ ವೇದಿಕೆ, ಮುಖ್ಯಮಂತ್ರಿ ಹಾಗೂ ರಾಜ್ಯ ಸರ್ಕಾರಕ್ಕೆ ಧನ್ಯವಾದ ಸಲ್ಲಿಸಿದೆ. ಆದರೆ, ಕೇವಲ ಮಧ್ಯಮ ಬರದ ವರ್ಗೀಕರಣದಿಂದ ರೈತರ ಸಂಕಷ್ಟಕ್ಕೆ ಪೂರ್ಣ ಪ್ರಮಾಣದ ಪರಿಹಾರ ದೊರೆಯುವುದಿಲ್ಲ ಎಂದು ಹೇಳಿದೆ. ಬೆಳೆಹಾನಿಗೊಳಗಾದ ಅರ್ಹ ರೈತರಿಗೆ ತ್ವರಿತ ಹಾಗೂ ಸಮರ್ಪಕ ಪರಿಹಾರ ನೀಡಬೇಕು. ಪಾರದರ್ಶಕವಾಗಿ ಬೆಳೆಹಾನಿ ಸಮೀಕ್ಷೆ ನಡೆಸಿ ಯಾವುದೇ ರೈತ ಪರಿಹಾರದಿಂದ ವಂಚಿತರಾಗದಂತೆ ಕ್ರಮ ಕೈಗೊಳ್ಳಬೇಕು. ಬೆಳೆ ವಿಮೆ ಪರಿಹಾರವನ್ನು ವಿಳಂಬವಿಲ್ಲದೆ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಲಾಗಿದೆ.

ರೈತರ ಕೃಷಿ ಸಾಲದ ಮರುಪಾವತಿಗೆ ಕಾಲಾವಕಾಶ ನೀಡುವುದರ ಜೊತೆಗೆ ಬಡ್ಡಿ ಮನ್ನಾ ಕುರಿತು ಕ್ರಮ ಕೈಗೊಳ್ಳಬೇಕು. ಜಾನುವಾರುಗಳಿಗೆ ಅಗತ್ಯ ಪ್ರಮಾಣದಲ್ಲಿ ಮೇವು ಹಾಗೂ ಕುಡಿಯುವ ನೀರು ಒದಗಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯವಿರುವ ಕಡೆ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು. ಬರದಿಂದ ಉದ್ಯೋಗ ಕಳೆದುಕೊಂಡ ಗ್ರಾಮೀಣ ಜನರಿಗೆ ನರೇಗಾ ಯೋಜನೆಯಡಿ ಹೆಚ್ಚಿನ ಕೆಲಸ ನೀಡಬೇಕು ಎಂದು ವೇದಿಕೆ ಒತ್ತಾಯಿಸಿದೆ.

ಬರ ಘೋಷಣೆಯಿಂದ ಹೋರಾಟ ಸಂಪೂರ್ಣ ಅಂತ್ಯಗೊಂಡಿಲ್ಲ. ಸರ್ಕಾರದ ಘೋಷಣೆಯ ಪ್ರಯೋಜನ ಪ್ರತಿಯೊಬ್ಬ ಸಂತ್ರಸ್ತ ರೈತನ ಮನೆಬಾಗಿಲಿಗೆ ತಲುಪಿದಾಗ ಮಾತ್ರ ಹೋರಾಟದ ನಿಜವಾದ ಯಶಸ್ಸು ಸಾಧ್ಯ. ಮಧ್ಯಮ ಬರದ ಬದಲು ಸಂಪೂರ್ಣ ಬರಗಾಲ ಘೋಷಣೆ ಹಾಗೂ ರೈತರಿಗೆ ಅಗತ್ಯ ಪರಿಹಾರ ನೀಡುವ ಬೇಡಿಕೆಗೆ ಸರ್ಕಾರ ಸ್ಪಂದಿಸದಿದ್ದರೆ ಮತ್ತೆ ಹೋರಾಟ ನಡೆಸುವುದು ಅನಿವಾರ್ಯ ಎಂದು GEN-Z ವೇದಿಕೆ ಎಚ್ಚರಿಕೆ ನೀಡಿದೆ.

### ಗದಗ, ಮುಂಡರಗಿ, ರೋಣ 'ಮಧ್ಯಮ ಬರ' ಪಟ್ಟಿಗೆ; ಸೆ.24ರಿಂದ ಹೊಲಗಳಲ್ಲೇ ಬರ ಪರಿಶೀಲನೆ


# ಎಚ್‌ಕೆ ಎಚ್ಚರಿಕೆ ಬೆನ್ನಲ್ಲೇ ಬರದ ಘೋಷಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಬೆನ್ನಲ್ಲೇ ಗದಗ ಜಿಲ್ಲೆಗೆ ರಾಜ್ಯ ಸರ್ಕಾರದಿಂದ ಮಹತ್ವದ ಘೋಷಣೆ ಹೊರಬಿದ್ದಿದೆ. ಗದಗ, ಮುಂಡರಗಿ ಹಾಗೂ ರೋಣ ತಾಲೂಕುಗಳನ್ನು 'ಮಧ್ಯಮ ಬರ' ಎಂದು ಗುರುತಿಸಿ, ಗ್ರೌಂಡ್ ಟ್ರೂಥಿಂಗ್‌ಗೆ ಅರ್ಹ ತಾಲೂಕುಗಳ ಪಟ್ಟಿಗೆ ಸೇರಿಸಲಾಗಿದೆ. ಇದರಿಂದ ಜಿಲ್ಲೆಯ ರೈತರಲ್ಲಿ ಕೊಂಚ ನೆಮ್ಮದಿ ಮೂಡಿದೆ.

ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಸೆ.22ರಂದು ಹೊರಡಿಸಿರುವ ನಾಲ್ಕನೇ ಹಂತದ ಅಧಿಸೂಚನೆಯಲ್ಲಿ ರಾಜ್ಯದ 11 ಹೆಚ್ಚುವರಿ ತಾಲೂಕುಗಳನ್ನು ಗ್ರೌಂಡ್ ಟ್ರೂಥಿಂಗ್‌ಗೆ ಆಯ್ಕೆ ಮಾಡಲಾಗಿದ್ದು, ಅದರಲ್ಲಿ ಗದಗ ಜಿಲ್ಲೆಯ ಈ ಮೂರು ತಾಲೂಕುಗಳು ಸ್ಥಾನ ಪಡೆದಿವೆ.

ಈ ಬೆಳವಣಿಗೆಯ ಬೆನ್ನಲ್ಲೇ ಶಾಸಕ ಎಚ್.ಕೆ. ಪಾಟೀಲರ ರಾಜೀನಾಮೆ ಎಚ್ಚರಿಕೆ ಕೂಡ ಗಮನ ಸೆಳೆದಿದೆ. ಸೆ.20ರಂದು ಮುಳಗುಂದದಲ್ಲಿ ನಡೆದ ರೈತರ ಹೋರಾಟದಲ್ಲಿ ಮಾತನಾಡಿದ್ದ ಎಚ್.ಕೆ. ಪಾಟೀಲರು, ಗದಗ ತಾಲೂಕನ್ನು ಬರಪೀಡಿತ ಎಂದು ಘೋಷಿಸದಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಎಚ್ಚರಿಸಿದ್ದರು.



ಇದೀಗ ಸರ್ಕಾರದ ಅಧಿಸೂಚನೆಯಲ್ಲಿ ಗದಗ, ಮುಂಡರಗಿ ಹಾಗೂ ರೋಣ ತಾಲೂಕುಗಳಿಗೆ ಮಧ್ಯಮ ಬರದ ವರ್ಗೀಕರಣ ನೀಡಿರುವುದು ರಾಜಕೀಯ ಹಾಗೂ ರೈತ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

**ಸೆ.24ರಿಂದ ಗ್ರೌಂಡ್ ಟ್ರೂಥಿಂಗ್**

ಅಧಿಸೂಚನೆಯ ಪ್ರಕಾರ ಸೆ.23ರಂದು ಬೆಳೆಗಳ ಆಯ್ಕೆ, ಗ್ರೌಂಡ್ ಟ್ರೂಥಿಂಗ್ ತಂಡಗಳ ರಚನೆ ಹಾಗೂ ಗ್ರಾಮಗಳ ರ್ಯಾಂಡಮೈಸೇಶನ್ ನಡೆಯಲಿದೆ. ಸೆ.24 ಮತ್ತು 25ರಂದು ಕ್ಷೇತ್ರಮಟ್ಟದಲ್ಲಿ ಗ್ರೌಂಡ್ ಟ್ರೂಥಿಂಗ್ ನಡೆಸಲಾಗುತ್ತದೆ. ಬಳಿಕ ಸೆ.28ರಂದು ಪರಿಶೀಲನಾ ಪ್ರಕ್ರಿಯೆ ಪೂರ್ಣಗೊಳಿಸಿ ವರದಿ ಸಲ್ಲಿಸಲು ಸೂಚಿಸಲಾಗಿದೆ. ಗ್ರೌಂಡ್ ಟ್ರೂಥಿಂಗ್ ವೇಳೆ ಬೆಳೆಹಾನಿ ಸೇರಿದಂತೆ ಬರದ ಮಾನದಂಡಗಳನ್ನು ಪರಿಶೀಲಿಸಲಾಗುತ್ತದೆ. ಕ್ಷೇತ್ರ ಪರಿಶೀಲನೆಯಲ್ಲಿ ಅಂದಾಜು ಬೆಳೆ ನಷ್ಟ ಶೇ.33 ಅಥವಾ ಅದಕ್ಕಿಂತ ಹೆಚ್ಚಿರುವುದನ್ನು ಪ್ರಮುಖ ಮಾನದಂಡವಾಗಿ ಪರಿಗಣಿಸಲಾಗುತ್ತದೆ. ಬೆಳೆಗಳ ಸ್ಥಿತಿ, ಹಾನಿಯ ಪ್ರಮಾಣ, ಜಿಯೋ-ಟ್ಯಾಗ್ ಛಾಯಾಚಿತ್ರಗಳು ಹಾಗೂ ಜಿಪಿಎಸ್ ನಿರ್ದೇಶಾಂಕಗಳನ್ನೂ ದಾಖಲಿಸಲಾಗುತ್ತದೆ.

**ಇನ್ನೂ ಅಂತಿಮ ಘೋಷಣೆ ಬಾಕಿ**

ಸದ್ಯ ಗದಗ, ಮುಂಡರಗಿ ಹಾಗೂ ರೋಣ ತಾಲೂಕುಗಳನ್ನು 'ಮಧ್ಯಮ ಬರ' ಎಂದು ಗುರುತಿಸಿ ಗ್ರೌಂಡ್ ಟ್ರೂಥಿಂಗ್‌ಗೆ ಅರ್ಹವೆಂದು ಪರಿಗಣಿಸಲಾಗಿದೆ. ಕ್ಷೇತ್ರ ಪರಿಶೀಲನೆಯ ವರದಿ ಆಧರಿಸಿ ಮುಂದಿನ ಹಂತದಲ್ಲಿ ಬರಪೀಡಿತ ತಾಲೂಕುಗಳ ಘೋಷಣೆ ಹಾಗೂ ಪರಿಹಾರ ಕ್ರಮಗಳ ಕುರಿತು ಸರ್ಕಾರ ನಿರ್ಧಾರ ಕೈಗೊಳ್ಳಲಿದೆ.

ಖಾರಿಫ್ ಹಂಗಾಮು ಮುಗಿಯುವವರೆಗೆ ಬರ ಪರಿಸ್ಥಿತಿಯನ್ನು ನಿರಂತರವಾಗಿ ಪರಿಶೀಲಿಸುವುದಾಗಿ ಸರ್ಕಾರ ತಿಳಿಸಿದ್ದು, ಅಗತ್ಯವಿದ್ದಲ್ಲಿ ಮುಂದಿನ ಹಂತಗಳಲ್ಲಿಯೂ ಗ್ರೌಂಡ್ ಟ್ರೂಥಿಂಗ್ ನಡೆಸುವ ಸಾಧ್ಯತೆಯಿದೆ. ಗದಗ ಜಿಲ್ಲೆಯಲ್ಲಿ ಮಳೆ ಕೊರತೆ, ಬೆಳೆಹಾನಿ ಮತ್ತು ನೀರಿನ ಸಮಸ್ಯೆಯಿಂದ ರೈತರು ಸಂಕಷ್ಟದಲ್ಲಿರುವ ಹಿನ್ನೆಲೆಯಲ್ಲಿ, ಮಧ್ಯಮ ಬರದ ವರ್ಗೀಕರಣದ ಬಳಿಕ ಅಂತಿಮವಾಗಿ ಯಾವ ರೀತಿಯ ಪರಿಹಾರ ಸಿಗಲಿದೆ ಎಂಬುದೇ ಇದೀಗ ರೈತರ ಮುಂದಿರುವ ಪ್ರಮುಖ ಪ್ರಶ್ನೆಯಾಗಿದೆ.

### ಗದಗ-ಬೆಟಗೇರಿ ಅವಳಿ ನಗರದಲ್ಲಿ ಅದ್ಧೂರಿ ವಿಸರ್ಜನಾ ಮೆರವಣಿಗೆ

# ವಿಘ್ನನಿವಾರಕನಿಗೆ ಅಂತಿಮ ವಿದಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಗಣೇಶ ಚತುರ್ಥಿಯ 9ನೇ ದಿನವಾದ ಮಂಗಳವಾರ ಗದಗ-ಬೆಟಗೇರಿ ಅವಳಿ ನಗರದಲ್ಲಿ ಸಾರ್ವಜನಿಕ ಗಣೇಶೋತ್ಸವಕ್ಕೆ ಅದ್ಧೂರಿ ವಿಸರ್ಜನಾ ಮೆರವಣಿಗೆಯೊಂದಿಗೆ ತೆರೆ ಬಿದ್ದಿತು. ಸಾರ್ವಜನಿಕ ಗಣೇಶೋತ್ಸವ ಮಹಾಮಂಡಳಿಯ ಆಶ್ರಯದಲ್ಲಿ ಪ್ರತಿಷ್ಠಾಪಿಸಲಾಗಿದ್ದ ಅಂದಾಜು 114 ಗಣೇಶ ಮೂರ್ತಿಗಳನ್ನು ಸಡಗರ-ಸಂಭ್ರಮದಿಂದ ವಿಸರ್ಜಿಸಲಾಯಿತು.




> ಸಾರ್ವಜನಿಕ ಗಣೇಶ ಮೂರ್ತಿಗಳನ್ನು ಒಂಬತ್ತನೇ ದಿನ ಒಂದೇ ದಿನ ಸಾಮೂಹಿಕವಾಗಿ ವಿಸರ್ಜಿಸುವ ನಿರ್ಧಾರವು ಹಿಂದೂ ಸಮಾಜದಲ್ಲಿ ಒಗ್ಗಟ್ಟು ಮೂಡಿಸುವ ಉದ್ದೇಶ ಹೊಂದಿದೆ. ಸಾಮೂಹಿಕ ವಿಸರ್ಜನೆಯ ಮೂಲಕ ಎಲ್ಲರೂ ಒಂದಾಗಿ ಗಣೇಶೋತ್ಸವ ಆಚರಿಸುವ ಸಂದೇಶ ನೀಡಲಾಗುತ್ತಿದೆ.
>
> – ರಾಜು ಖಾನಪ್ಪನವರ, ಹಿಂದೂ ಸಂಘಟನೆಗಳ ಮುಖಂಡ

#### ಭಕ್ತರಿಗೆ ಅನ್ನಸಂತರ್ಪಣೆ

ಗಣೇಶೋತ್ಸವದ ಹಿನ್ನೆಲೆಯಲ್ಲಿ ನಗರದ ವಿವಿಧೆಡೆ ಗಜಾನನ ಸಮಿತಿಗಳ ವತಿಯಿಂದ ಅನ್ನಸಂತರ್ಪಣೆ ನಡೆಯಿತು. ನೂರಾರು ಭಕ್ತರು ಪ್ರಸಾದ ಸ್ವೀಕರಿಸಿದರು. ಗಣೇಶೋತ್ಸವದ ಯಶಸ್ವಿ ಆಚರಣೆಗೆ ಸಹಕರಿಸಿದ ಗುರುಹಿರಿಯರು, ಯುವಕರು, ಮಹಿಳೆಯರು ಹಾಗೂ ಸಂಘದ ಸದಸ್ಯರಿಗೆ ಆಯೋಜಕರು ಕೃತಜ್ಞತೆ ಸಲ್ಲಿಸಿದರು.

ನಗರದ ವಿವಿಧೆಡೆ ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಷ್ಠಾಪಿಸಿದ್ದ ಗಣೇಶ ಮೂರ್ತಿಗಳಿಗೆ ಮಧ್ಯಾಹ್ನ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಅಲಂಕೃತ ತೆರೆದ ವಾಹನಗಳು ಹಾಗೂ ಟ್ರ್ಯಾಕ್ಟರ್‌ಗಳಲ್ಲಿ ಮೆರವಣಿಗೆ ಮೂಲಕ ವಿಸರ್ಜನಾ ಸ್ಥಳಕ್ಕೆ ಕೊಂಡೊಯ್ಯಲಾಯಿತು. ಪ್ರಮುಖ ಬೀದಿಗಳಲ್ಲಿ ಸಾಗಿದ ಮೆರವಣಿಗೆಗೆ ಡಿಜೆ ಸಂಗೀತ, ಡೊಳ್ಳು, ಬಾಜಾ-ಭಜಂತ್ರಿಗಳ ಸಾಥ್ ದೊರೆತರೆ, ಯುವಕರು ಹಾಗೂ ಮಕ್ಕಳು ಸಂಗೀತದ ತಾಳಕ್ಕೆ ಹೆಜ್ಜೆ ಹಾಕಿ ಸಂಭ್ರಮಿಸಿದರು. ಅಲ್ಲಲ್ಲಿ ಪಟಾಕಿ ಸಿಡಿಸಿ ಹಬ್ಬದ ವಾತಾವರಣ ಮತ್ತಷ್ಟು ರಂಗೇರಿತು.

ಮೆರವಣಿಗೆಯುದ್ದಕ್ಕೂ 'ಗಣಪತಿ ಬಪ್ಪಾ ಮೋರಯಾ' ಘೋಷಣೆಗಳು ಮೊಳಗಿದವು. ವಿವಿಧ ಸಂಘ-ಸಂಸ್ಥೆಗಳ ಸದಸ್ಯರು, ಮಹಿಳೆಯರು, ಮಕ್ಕಳು ಸೇರಿದಂತೆ ನೂರಾರು ಭಕ್ತರು ಪಾಲ್ಗೊಂಡಿದ್ದರು. ಸಂಜೆ ಆರಂಭವಾದ ವಿಸರ್ಜನಾ ಮೆರವಣಿಗೆ ತಡರಾತ್ರಿವರೆಗೂ ಮುಂದುವರಿಯಿತು.

ನಗರದ ಭೀಷ್ಮ ಕೆರೆ ಸಮೀಪದ ಸಿಂಹದ ಕೆರೆಯಲ್ಲಿ ಸಾರ್ವಜನಿಕ ಗಣೇಶ ಮೂರ್ತಿಗಳ ವಿಸರ್ಜನೆಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿತ್ತು. ದೊಡ್ಡ ಗಾತ್ರದ ಮೂರ್ತಿಗಳನ್ನು ಕ್ರೇನ್‌ಗಳ ನೆರವಿನಿಂದ ಕೆರೆಗೆ ಇಳಿಸಿ ವಿಸರ್ಜಿಸಲಾಯಿತು. ಮೆರವಣಿಗೆಯಲ್ಲಿ ಪಾಲ್ಗೊಂಡ ಮೂರ್ತಿಗಳನ್ನು ವಿಸರ್ಜನಾ ಸ್ಥಳಕ್ಕೆ ಸುರಕ್ಷಿತವಾಗಿ ತರಲು ಅಗತ್ಯ ವ್ಯವಸ್ಥೆ ಮಾಡಲಾಗಿತ್ತು.

ಸಾರ್ವಜನಿಕ ಗಣೇಶೋತ್ಸವದ ಅಂಗವಾಗಿ ಕಳೆದ ಒಂಬತ್ತು ದಿನಗಳಿಂದ ನಗರದ ವಿವಿಧ ಗಜಾನನ ಸಮಿತಿಗಳ ವತಿಯಿಂದ ಪೂಜೆ, ಪ್ರಸಾದ ವಿತರಣೆ, ಅನ್ನಸಂತರ್ಪಣೆ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಮಂಗಳವಾರ ಸಾಮೂಹಿಕ ವಿಸರ್ಜನೆಯೊಂದಿಗೆ ಒಂಬತ್ತು ದಿನಗಳ ಗಣೇಶೋತ್ಸವಕ್ಕೆ ಸಂಭ್ರಮದ ತೆರೆ ಬಿದ್ದಿತು.

ಸಾರ್ವಜನಿಕ ಗಣೇಶೋತ್ಸವ ಮಹಾಮಂಡಳಿಯ ನಿರ್ಧಾರದಂತೆ ಅವಳಿ ನಗರದ ಸಾರ್ವಜನಿಕ ಗಣೇಶ ಮೂರ್ತಿಗಳನ್ನು ಒಂಬತ್ತನೇ ದಿನ ಒಂದೇ ದಿನ ಸಾಮೂಹಿಕವಾಗಿ ವಿಸರ್ಜಿಸಲಾಯಿತು. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಮಹಾಮಂಡಳಿಯ ವ್ಯಾಪ್ತಿಯಲ್ಲಿರುವ ಎಲ್ಲ ಮೂರ್ತಿಗಳನ್ನು ಒಂದೇ ದಿನ ವಿಸರ್ಜಿಸಲು ನಿರ್ಧರಿಸಲಾಗಿತ್ತು ಎಂದು ಮಹಾಮಂಡಳಿ ಅಧ್ಯಕ್ಷ ರಾಜು ಮಲ್ಲಾಡದ ತಿಳಿಸಿದರು.

# ರೈತರ ಮೂಗಿಗೆ ತುಪ್ಪ ಸವರಿದ ಸರ್ಕಾರ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಶೇ.47ರಿಂದ 49ರಷ್ಟು ಮಳೆ ಕೊರತೆಯಾಗಿದ್ದು, ಬೆಳೆಹಾನಿಯಿಂದ ರೈತರು ಸಂಕಷ್ಟದಲ್ಲಿದ್ದರೂ ಗದಗ, ರೋಣ ಹಾಗೂ ಮುಂಡರಗಿ ತಾಲೂಕುಗಳನ್ನು ಕೇವಲ ಸಾಮಾನ್ಯ ಬರಪೀಡಿತ ಎಂದು ಘೋಷಿಸಿರುವುದು ರೈತರಿಗೆ ಮಾಡಿದ ಅನ್ಯಾಯ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಹಾಗೂ ರೈತ ರಕ್ಷಣಾ ಸಮಿತಿ ಅಧ್ಯಕ್ಷ ಪರಮೇಶ್ವರಪ್ಪ ಜಂತ್ಲಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಜಂಟಿ ಹೇಳಿಕೆಯಲ್ಲಿ, ಗದಗ ತಾಲೂಕಿನಲ್ಲಿ ವಾಡಿಕೆಯ 304.7 ಮಿ.ಮೀ. ಮಳೆಗೆ 154.9 ಮಿ.ಮೀ. ಮಳೆಯಾಗಿ ಶೇ.49ರಷ್ಟು ಕೊರತೆಯಾಗಿದೆ. ಮುಂಡರಗಿಯಲ್ಲಿ 232.6 ಮಿ.ಮೀ. ವಾಡಿಕೆ ಮಳೆಗೆ 120.9 ಮಿ.ಮೀ. ಮಳೆಯಾಗಿ ಶೇ.48ರಷ್ಟು ಹಾಗೂ ರೋಣದಲ್ಲಿ 338 ಮಿ.ಮೀ.ಗೆ 179.8 ಮಿ.ಮೀ. ಮಳೆಯಾಗಿ ಶೇ.47ರಷ್ಟು ಕೊರತೆಯಾಗಿದೆ. ಈ ಅಂಕಿ-ಅಂಶಗಳು ಜಿಲ್ಲೆಯ ಬರದ ತೀವ್ರತೆಯನ್ನು ಸ್ಪಷ್ಟಪಡಿಸುತ್ತವೆ ಎಂದು ತಿಳಿಸಿದ್ದಾರೆ.



ಗಜೇಂದ್ರಗಡ ತಾಲೂಕನ್ನು ತೀವ್ರ ಬರಪೀಡಿತ ಎಂದು ಘೋಷಿಸಿರುವ ಸರ್ಕಾರ, ಉಳಿದ ಮೂರು ತಾಲೂಕುಗಳನ್ನು ಸಾಮಾನ್ಯ ಬರ ಎಂದು ಗುರುತಿಸಿರುವುದು ಸಮರ್ಪಕವಲ್ಲ.

ಸಾಮಾನ್ಯ ಬರ ಘೋಷಣೆಯಿಂದ ರೈತರಿಗೆ ನಿರೀಕ್ಷಿತ ಪ್ರಮಾಣದ ಪರಿಹಾರ, ಬೆಳೆ ವಿಮೆ ಹಾಗೂ ಉದ್ಯೋಗ ಖಾತ್ರಿ ಯೋಜನೆಯಡಿ ಹೆಚ್ಚುವರಿ ಉದ್ಯೋಗದಂತಹ ನೆರವು ದೊರೆಯುವುದಿಲ್ಲ ಎಂದು ಅವರು ಹೇಳಿದ್ದಾರೆ. ಹೀಗಾಗಿ ಸರ್ಕಾರ ತನ್ನ ಆದೇಶವನ್ನು ಮರುಪರಿಶೀಲಿಸಿ ಗದಗ, ರೋಣ ಹಾಗೂ ಮುಂಡರಗಿ ತಾಲೂಕುಗಳನ್ನು ಸಂಪೂರ್ಣ ಅಥವಾ ತೀವ್ರ ಬರಪೀಡಿತ ಪ್ರದೇಶಗಳೆಂದು ಮರು ಘೋಷಿಸಬೇಕು ಎಂದು ಆಗ್ರಹಿಸಿದ್ದಾರೆ. ರೈತರ ಬೇಡಿಕೆಗೆ ಸರ್ಕಾರ ಸ್ಪಂದಿಸದಿದ್ದರೆ ಜಿಲ್ಲೆಯ ಎಲ್ಲ ರೈತ ಸಂಘಟನೆಗಳನ್ನು ಒಗ್ಗೂಡಿಸಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಯಲ್ಲಪ್ಪ ಎಚ್. ಬಾಬರಿ ಹಾಗೂ ಪರಮೇಶ್ವರಪ್ಪ ಜಂತ್ಲಿ ಎಚ್ಚರಿಕೆ ನೀಡಿದ್ದಾರೆ.

# ಮುಂದಿನ ಮೂರು ದಿನ ವರುಣಾರ್ಭಟ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯದಲ್ಲಿ ಮಳೆ ಪ್ರಮಾಣ ಕಡಿಮೆಯಾಗಿರುವ ಬೆನ್ನಲ್ಲೇ ಇದೀಗ ಹಲವು ಜಿಲ್ಲೆಗಳಲ್ಲಿ ಮುಂದಿನ ಮೂರು ದಿನ ಭಾರಿ ಮಳೆಯಾಗುವ ಸಾಧ್ಯತೆ ಇದೆ.

ಭಾರತೀಯ ಹವಾಮಾನ ಇಲಾಖೆ ರಾಜ್ಯದ ವಿವಿಧ ಭಾಗಗಳಲ್ಲಿ ಮಳೆಯ ಮುನ್ಸೂಚನೆ ನೀಡಿದ್ದು, ಬುಧವಾರ ಇಡೀ ಕರ್ನಾಟಕಕ್ಕೆ ಆರೆಂಜ್ ಅಲರ್ಟ್ ಘೋಷಿಸಿದೆ. ಗುರುವಾರ ಕರಾವಳಿ ಕರ್ನಾಟಕದಲ್ಲಿ ಭಾರಿ ಮಳೆಯ ಸಾಧ್ಯತೆ ಹಿನ್ನೆಲೆಯಲ್ಲಿ ರೆಡ್ ಅಲರ್ಟ್ ನೀಡಲಾಗಿದೆ. ಇದೇ ವೇಳೆ ದಕ್ಷಿಣ ಒಳನಾಡು ಕರ್ನಾಟಕಕ್ಕೂ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಶುಕ್ರವಾರವೂ ಕರಾವಳಿ ಹಾಗೂ ದಕ್ಷಿಣ ಒಳನಾಡು ಭಾಗಗಳಲ್ಲಿ ಮಳೆ ಮುಂದುವರಿಯುವ ಸಾಧ್ಯತೆ ಇದ್ದು, ಕೆಲವು ಪ್ರದೇಶಗಳಲ್ಲಿ ಅತಿ ತೀವ್ರ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮುಂದಿನ ಮೂರು ದಿನಗಳಲ್ಲಿ ಮಳೆಯ ಪ್ರಮಾಣ ಹೆಚ್ಚಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಹಾಗೂ ಸಂಬಂಧಿಸಿದ ಇಲಾಖೆಗಳು ಪರಿಸ್ಥಿತಿಯ ಮೇಲೆ ನಿಗಾ ವಹಿಸುವಂತೆ ಸೂಚಿಸಲಾಗಿದೆ.

# ಸೆ.25ರಿಂದ ಧಾರವಾಡದಲ್ಲಿ ಕೃಷಿ ಮೇಳ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಸೆಪ್ಟೆಂಬರ್ 25ರಿಂದ 28ರವರೆಗೆ ಕೃಷಿ ಮೇಳ-2026 ನಡೆಯಲಿದೆ. ಕೃಷಿ ವಿಶ್ವವಿದ್ಯಾಲಯ, ಕೃಷಿ ಹಾಗೂ ಸಂಬಂಧಿತ ಇಲಾಖೆಗಳು, ಕರ್ನಾಟಕ ಪ್ರದೇಶ ಕೃಷಿಕ ಸಮಾಜ ಮತ್ತು ನಬಾರ್ಡ್ ಸಹಯೋಗದಲ್ಲಿ ಮೇಳ ಆಯೋಜಿಸಲಾಗಿದೆ.

ಕೃಷಿಯಲ್ಲಿನ ನೂತನ ತಂತ್ರಜ್ಞಾನ, ನೈಸರ್ಗಿಕ ಹಾಗೂ ಸಾವಯವ ಕೃಷಿ, ಸುಸ್ಥಿರ ಉತ್ಪಾದನೆ ಮತ್ತು ರೈತರ ಆದಾಯ ಹೆಚ್ಚಿಸುವ ಮಾರ್ಗಗಳ ಕುರಿತು ತಜ್ಞರಿಂದ ಮಾಹಿತಿ ದೊರೆಯಲಿದೆ. ಬೀಜ ಮೇಳ, ವಿವಿಧ ಬೆಳೆಗಳ ಉತ್ಪಾದನಾ ತಂತ್ರಜ್ಞಾನ, ಸಮಗ್ರ ಪೋಷಕಾಂಶ ಹಾಗೂ ಪೀಡೆ ನಿರ್ವಹಣೆ ಕುರಿತು ಪ್ರದರ್ಶನಗಳಿರಲಿವೆ.

ಮಳೆನೀರು ಕೊಯ್ಲು, ಅಂತರ್ಜಲ ಮರುಪೂರಣ, ಹೈಟೆಕ್ ತೋಟಗಾರಿಕೆ, ಫಲ-ಪುಷ್ಪ ಪ್ರದರ್ಶನ, ಕೀಟ ಪ್ರಪಂಚ ಹಾಗೂ ಕೃಷಿಯಲ್ಲಿ ಡ್ರೋನ್ ಬಳಕೆ ಕುರಿತು ವಿಶೇಷ ಪ್ರದರ್ಶನ ಆಯೋಜಿಸಲಾಗಿದೆ. ರೈತರು ಕೃಷಿ ತಜ್ಞರೊಂದಿಗೆ ನೇರ ಸಮಾಲೋಚನೆ ನಡೆಸಲು ಅವಕಾಶವಿದೆ.

ಸಾಧಕ ರೈತರು ಮತ್ತು ರೈತ ಮಹಿಳೆಯರೊಂದಿಗೆ ಸಂವಾದ, ವಿವಿಧ ತರಬೇತಿ ಹಾಗೂ ಸ್ಪರ್ಧೆಗಳು, ಪಶುಸಂಗೋಪನೆ, ಕೃಷಿ ಅರಣ್ಯ ಮತ್ತು ಮೇವಿನ ಬೆಳೆಗಳ ಕುರಿತು ಮಾಹಿತಿ ನೀಡಲಾಗುತ್ತದೆ. ಎರೆಹುಳು ಗೊಬ್ಬರ, ಜೈವಿಕ ಗೊಬ್ಬರ, ಜೈವಿಕ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟದ ಜೊತೆಗೆ ಸಬ್ಸಿಡಿ ದರದಲ್ಲಿ ಕೃಷಿ ಯಂತ್ರೋಪಕರಣಗಳ ಮಾರಾಟಕ್ಕೂ ವ್ಯವಸ್ಥೆ ಮಾಡಲಾಗಿದೆ.

# ಚುನಾವಣಾ ನೀತಿ ಸಂಹಿತೆ ಜಾರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆ ಅಕ್ಟೋಬರ್ 2026ರಲ್ಲಿ ನಡೆಯಲಿರುವ ಹಿನ್ನೆಲೆಯಲ್ಲಿ ಸೆ.22ರಿಂದಲೇ ಚುನಾವಣಾ ನೀತಿ ಸಂಹಿತೆ ಜಾರಿಗೆ ಬಂದಿದೆ. ಇದರ ಬೆನ್ನಲ್ಲೇ ಜಿಲ್ಲೆಯಲ್ಲಿನ ಸರಕಾರಿ ವಾಹನಗಳು ಹಾಗೂ ಅತಿಥಿ ಗೃಹಗಳನ್ನು ಜಿಲ್ಲಾಡಳಿತದ ಅಧೀನಕ್ಕೆ ಪಡೆಯಲಾಗಿದೆ.

ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ನಗರಾಭಿವೃದ್ಧಿ ಪ್ರಾಧಿಕಾರ, ವಿವಿಧ ನಿಗಮ-ಮಂಡಳಿಗಳು, ಸಹಕಾರ ಸಂಘಗಳು ಹಾಗೂ ಉದ್ದಿಮೆಗಳಿಗೆ ಒದಗಿಸಲಾಗಿದ್ದ ಸರಕಾರಿ ವಾಹನಗಳನ್ನು ತಕ್ಷಣದಿಂದ ಹಿಂದಕ್ಕೆ ಪಡೆಯಲಾಗಿದೆ. ಈ ವಾಹನಗಳನ್ನು ಆಯಾ ತಾಲೂಕಿನ ತಹಸೀಲ್ದಾರರ ವಶಕ್ಕೆ ನೀಡಿ, ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಕಾಯ್ದಿರಿಸಲು ಸೂಚಿಸಲಾಗಿದೆ. ಗದಗ ತಾಲೂಕಿನ ಸರಕಾರಿ ವಾಹನಗಳನ್ನು ತಹಸೀಲ್ದಾರರು, ಜಿಲ್ಲಾಧಿಕಾರಿ ಕಚೇರಿಗೆ ಒಪ್ಪಿಸಬೇಕು. ಈ ಕುರಿತು ಎಲ್ಲ ತಹಸೀಲ್ದಾರರು ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

**ಅತಿಥಿ ಗೃಹಗಳ ಬಳಕೆಗೆ ನಿರ್ಬಂಧ**

ಜಿಲ್ಲೆಯ ಎಲ್ಲ ನಿರೀಕ್ಷಣಾ ಮಂದಿರಗಳು, ಪ್ರವಾಸಿ ಮಂದಿರಗಳು ಹಾಗೂ ವಿವಿಧ ನಿಗಮಗಳ ಅತಿಥಿ ಗೃಹಗಳನ್ನು ಕೂಡ ತಕ್ಷಣದಿಂದ ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಜಿಲ್ಲಾಧಿಕಾರಿಗಳ ಅಧೀನಕ್ಕೆ ಪಡೆಯಲಾಗಿದೆ.

ತಹಶೀಲ್ದಾರರು ತಮ್ಮ ವ್ಯಾಪ್ತಿಯಲ್ಲಿರುವ ಮೇಲ್ಕಂಡ ಕಟ್ಟಡಗಳನ್ನು ವಶಕ್ಕೆ ಪಡೆದು ಜಿಲ್ಲಾಡಳಿತಕ್ಕೆ ವರದಿ ಸಲ್ಲಿಸಬೇಕು. ಜಿಲ್ಲಾಧಿಕಾರಿಗಳ ಪೂರ್ವಾನುಮತಿ ಇಲ್ಲದೆ ಯಾವುದೇ ಉದ್ದೇಶಕ್ಕೂ ಈ ಕಟ್ಟಡಗಳನ್ನು ನೀಡಬಾರದು ಎಂದು ಜಿಲ್ಲಾ ದಂಡಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳು ಆದೇಶಿಸಿದ್ದಾರೆ.

# ಸೆ.25ರಂದು ಗದಗದಲ್ಲಿ ನೇರ ಉದ್ಯೋಗ ಸಂದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಸೆಪ್ಟೆಂಬರ್ 25ರಂದು ಬೆಳಗ್ಗೆ 10 ಗಂಟೆಗೆ ನಗರದ ಜಿಲ್ಲಾ ಆಡಳಿತ ಭವನದ 2ನೇ ಮಹಡಿ, ಕೊಠಡಿ ಸಂಖ್ಯೆ 215ರಲ್ಲಿ ನೇರ ಉದ್ಯೋಗ ಸಂದರ್ಶನ ಆಯೋಜಿಸಲಾಗಿದೆ. ಹುಬ್ಬಳ್ಳಿಯ ಆರ್.ಎನ್.ಎಸ್. ಮೋಟಾರ್ಸ್ ಕಂಪನಿ ಸಂದರ್ಶನದಲ್ಲಿ ಭಾಗವಹಿಸಲಿದ್ದು, ಫೀಲ್ಡ್ ಸೇಲ್ಸ್ ಎಕ್ಸಿಕ್ಯೂಟಿವ್, ಟೆಕ್ನಿಷಿಯನ್, ಸೂಪರ್‌ವೈಸರ್, ವರ್ಕ್ ಮ್ಯಾನೇಜರ್ ಸೇರಿದಂತೆ ವಿವಿಧ ಹುದ್ದೆಗಳಿಗೆ ನೇಮಕಾತಿ ನಡೆಯಲಿದೆ. ಪಿಯುಸಿ, ಐಟಿಐ, ಡಿಪ್ಲೊಮಾ ಅಥವಾ ಯಾವುದೇ ಪದವಿ ಹೊಂದಿರುವ 18ರಿಂದ 35 ವರ್ಷದೊಳಗಿನವರು ಅರ್ಹರಾಗಿದ್ದು, ಗದಗ, ಹುಬ್ಬಳ್ಳಿ, ಧಾರವಾಡ ಹಾಗೂ ಹಾವೇರಿಯಲ್ಲಿ ಉದ್ಯೋಗಾವಕಾಶಗಳಿವೆ. ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿ, ಎರಡು ರೆಸ್ಯೂಮೆ ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ಸಂದರ್ಶನದಲ್ಲಿ ಭಾಗವಹಿಸುವವರಿಗೆ ನೋಂದಣಿ ಕಡ್ಡಾಯವಾಗಿದ್ದು, ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ 6363330688, 8861002275, 9036453404 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ತಿಳಿಸಿದ್ದಾರೆ.



ಗದಗದ ಎಸ್‌ಎಸ್‌ಕೆ ತರುಣ ಸಂಘ (ರಿ.) ಗಜಾನನ ಉತ್ಸವ ಸಮಿತಿ ವತಿಯಿಂದ 8ರಿಂದ 16 ವರ್ಷದ ಮಕ್ಕಳಿಗಾಗಿ ಕ್ಲೇ ಮಾಡೆಲ್ ಹಾಗೂ ಭಕ್ತಿಗೀತೆ ಸ್ಪರ್ಧೆ ಸೆ.20ರಂದು ಆಯೋಜಿಸಲಾಗಿತ್ತು.

## ಜಕ್ಕಲಿಯಲ್ಲಿ ಇಂದಿನಿಂದ ಪುರಾಣ ಪ್ರವಚನ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಜಕ್ಕಲಿ ಗ್ರಾಮದ ಶ್ರೀ ಗುರು ಅನ್ನದಾನೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಸೆ.23ರಿಂದ ಅ.20ರವರೆಗೆ ಪ್ರತಿದಿನ ಸಂಜೆ 7.30ರಿಂದ ರಾತ್ರಿ 9ರವರೆಗೆ ಶ್ರೀಮಠದ ಆವರಣದಲ್ಲಿ ಮಹಾದಾಸೋಹಿ ಕಲಬುರ್ಗಿ ಶ್ರೀ ಶರಣಬಸವೇಶ್ವರ ಪುರಾಣ ಪ್ರವಚನ ಆಯೋಜಿಸಲಾಗಿದೆ.

ಹಾಲಕೆರೆಯ ಅನ್ನದಾನೇಶ್ವರ ಸಂಸ್ಥಾನ ಮಠದ ಜಗದ್ಗುರು ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ಅಪ್ಪಣೆಯ ಮೇರೆಗೆ ಕಾರ್ಯಕ್ರಮ ನಡೆಯಲಿದೆ.

ದ್ಯಾಂಪೂರದ ಕಲ್ಲಿನಾಥ ಕವಿ ವಿರಚಿತ ಶರಣಬಸವೇಶ್ವರ ಪುರಾಣವನ್ನು ಬೇವೂರಿನ ಪ್ರವಚನ ಪ್ರವೀಣ ವೇ.ಮೂ. ಪಂಡಿತ ಎಂ.ಜಿ. ಗುರುಸಿದ್ಧೇಶ್ವರ ಶಾಸ್ತ್ರಿಗಳು ಪ್ರವಚನದ ಮೂಲಕ ಭಕ್ತರಿಗೆ ತಿಳಿಸಿಕೊಡಲಿದ್ದಾರೆ. ಆಕಾಶವಾಣಿ ಕಲಾವಿದ ಸುರೇಶ ಬೆನಕಟ್ಟಿ ತಬಲಾ ವಾದನದ ಮೂಲಕ ಸಹಕರಿಸಲಿದ್ದಾರೆ. ಪುರಾಣ ಪ್ರವಚನದ ಮೂಲಕ ಶರಣರ ಜೀವನ, ಶಿವಭಕ್ತಿ, ದಾಸೋಹ ಹಾಗೂ ಧಾರ್ಮಿಕ ಮೌಲ್ಯಗಳ ಸಂದೇಶವನ್ನು ಭಕ್ತರಿಗೆ ತಲುಪಿಸುವ ಉದ್ದೇಶ ಹೊಂದಲಾಗಿದೆ.

ಜಕ್ಕಲಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಪ್ರತಿದಿನ ನಡೆಯುವ ಪುರಾಣ ಪ್ರವಚನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಾತ್ರಾ ಸಮಿತಿ ಹಾಗೂ ಸಕಲ ಸದ್ಭಕ್ತ ಮಂಡಳಿ ಮನವಿ ಮಾಡಿದೆ.

### ರಾಜಿ ಸಂಧಾನಕ್ಕೆ ಮಣಿದ ಮನಸ್ತಾಪ

# ಲೋಕ ಅದಾಲತ್‌ನಲ್ಲಿ ಮತ್ತೆ ಒಂದಾದ 23 ದಂಪತಿಗಳು



> ಲೋಕ ಅದಾಲತ್‌ನಲ್ಲಿ ಪ್ರಕರಣಗಳ ಇತ್ಯರ್ಥಕ್ಕೆ ಸಹಕರಿಸಿದ ನ್ಯಾಯಾಧೀಶರು, ನ್ಯಾಯವಾದಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಬ್ಯಾಂಕ್‌ಗಳು, ಸಹಕಾರಿ ಸಂಘಗಳು, ಹಣಕಾಸು ಸಂಸ್ಥೆಗಳು, ವಿಮಾ ಕಂಪನಿಗಳು, ಪೊಲೀಸ್ ಇಲಾಖೆ ಹಾಗೂ ಕಕ್ಷಿದಾರರಿಗೆ ಅಭಿನಂದನೆಗಳು.
>
> – ಎನ್.ವಿ. ವಿಜಯ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮನಸ್ತಾಪದಿಂದ ದೂರವಾಗಿದ್ದ 23 ದಂಪತಿಗಳು ಲೋಕ ಅದಾಲತ್‌ನ ರಾಜಿ ಸಂಧಾನದ ಮೂಲಕ ಮತ್ತೆ ಒಂದಾಗಿ ಹೊಸ ಬದುಕಿಗೆ ಹೆಜ್ಜೆಯಿಟ್ಟಿದ್ದಾರೆ. ಧಾರವಾಡ ಕೌಟುಂಬಿಕ ನ್ಯಾಯಾಲಯದಲ್ಲಿ 9, ಹುಬ್ಬಳ್ಳಿ ಕೌಟುಂಬಿಕ ನ್ಯಾಯಾಲಯದಲ್ಲಿ 12 ಹಾಗೂ ಕುಂದಗೋಳ ನ್ಯಾಯಾಲಯದಲ್ಲಿ 2 ವೈವಾಹಿಕ ಮತ್ತು ಜೀವನಾಂಶ ಪ್ರಕರಣಗಳಲ್ಲಿ ದಂಪತಿಗಳು ರಾಜಿ ಸಂಧಾನಕ್ಕೆ ಒಪ್ಪಿಕೊಂಡು ಕುಟುಂಬ ಜೀವನಕ್ಕೆ ಮರಳಿದ್ದಾರೆ.

ಸೆ.19ರಂದು ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಧಾರವಾಡ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಒಟ್ಟು 27,531 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ.

ಈ ಮೂಲಕ ಕಾನೂನು ಹೋರಾಟದ ಬದಲಿಗೆ ಸಂಧಾನದ ಮೂಲಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗಿದೆ.

ನ್ಯಾಯಾಲಯಗಳಲ್ಲಿ ಬಾಕಿ ಇದ್ದ 54,937 ಪ್ರಕರಣಗಳ ಪೈಕಿ 3,908 ಪ್ರಕರಣಗಳನ್ನು ಲೋಕ ಅದಾಲತ್‌ಗೆ ತೆಗೆದುಕೊಳ್ಳಲಾಗಿತ್ತು. ಅವುಗಳಲ್ಲಿ 2,160 ಬಾಕಿ ಪ್ರಕರಣಗಳು ಇತ್ಯರ್ಥಗೊಂಡಿವೆ.

ಪೂರ್ವ ವ್ಯಾಜ್ಯಕ್ಕೆ ಸಂಬಂಧಿಸಿದ 31,090 ಪ್ರಕರಣಗಳ ಪೈಕಿ 27,531 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಪರಿಹರಿಸಲಾಗಿದೆ.

ಪೂರ್ವ ವ್ಯಾಜ್ಯ ಪ್ರಕರಣಗಳಲ್ಲಿ ₹29,11,872 ಮೊತ್ತದ ಪ್ರಕರಣಗಳು ಇತ್ಯರ್ಥಗೊಂಡಿದ್ದರೆ, ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದ್ದ ಪ್ರಕರಣಗಳಲ್ಲಿ ₹48,50,60,531 ಮೊತ್ತದ ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥಗೊಂಡಿವೆ.

ಇದೇ ವೇಳೆ 207 ಹಿರಿಯ ನಾಗರಿಕರು ತಮ್ಮ ವಿವಾದಗಳನ್ನು ಲೋಕ ಅದಾಲತ್‌ನಲ್ಲಿ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಂಡಿದ್ದಾರೆ.

ಲೋಕ ಅದಾಲತ್ ಯಶಸ್ವಿಗೆ ಸಹಕರಿಸಿದ ಎಲ್ಲರಿಗೂ ಧನ್ಯವಾದ ಸಲ್ಲಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎ.ಎಂ. ಬಡಿಗೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಳೆಯ ನಡುವೆಯೂ ಶ್ರದ್ಧೆಯಿಂದ ನೆರವೇರಿದ ಗಣಹೋಮ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾನಯೋಗಿ ಶ್ರೀ ಪಂ. ಪಂಚಾಕ್ಷರ ಗವಾಯಿಗಳ ಎಪಿಎಂಸಿ ಪ್ರಾಂಗಣದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಆಯೋಜಿಸಿದ್ದ ಗಣೇಶೋತ್ಸವ ಮಂಟಪದಲ್ಲಿ ರವಿವಾರ ಸಂಜೆ ಗಣಹೋಮ ಶ್ರದ್ಧಾ-ಭಕ್ತಿಯಿಂದ ನೆರವೇರಿತು. ಶ್ರೀ ಶಂಭುಲಿಂಗಯ್ಯ ಸ್ವಾಮಿಗಳ ನೇತೃತ್ವದಲ್ಲಿ ಧಾರ್ಮಿಕ ವಿಧಿವಿಧಾನಗಳು ಆರಂಭವಾದ ಕೆಲವೇ ಕ್ಷಣಗಳಲ್ಲಿ ನಗರದಲ್ಲಿ ಭಾರಿ ಮಳೆ ಸುರಿಯಿತು. ಮಳೆಯ ನಡುವೆಯೇ ಹೋಮ-ಹವನವನ್ನು ಪೂರ್ಣಗೊಳಿಸಿದರು.

ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವಾಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ ಸೇರಿದಂತೆ ಪದಾಧಿಕಾರಿಗಳು, ಎಪಿಎಂಸಿ ವರ್ತಕರು, ರೈತರು ಹಾಗೂ ನೂರಾರು ಭಕ್ತರು ಪಾಲ್ಗೊಂಡಿದ್ದರು.

## ಗ್ರಾಮೀಣ ಮಿಷನ್ ಅನುಷ್ಠಾನಕ್ಕೆ ವೇಗ ನೀಡಿ

**ವಿಜಯಸಾಕ್ಷಿ ಸುದ್ದಿ, ಧಾರವಾಡ**


> ಸರ್ಕಾರದ ಯೋಜನೆಗಳ ಉದ್ದೇಶ ಗ್ರಾಮೀಣ ಜನರಿಗೆ ತಲುಪುವುದೇ ಆಗಿದೆ. ಅನುಷ್ಠಾನದಲ್ಲಿ ವಿಳಂಬವಾಗದಂತೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ, ಪ್ರಗತಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು.
>
> – ಭುವನೇಶ ಪಾಟೀಲ, ಸಿಇಒ, ಜಿಲ್ಲಾ ಪಂಚಾಯಿತಿ

ಗ್ರಾಮೀಣ ಜನರಿಗೆ ಸರ್ಕಾರದ ಯೋಜನೆಗಳ ಸೌಲಭ್ಯ ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಯೋಜನೆಗಳ ಅನುಷ್ಠಾನಕ್ಕೆ ಹೆಚ್ಚಿನ ವೇಗ ನೀಡಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಮಂಗಳವಾರ ನಡೆದ ವಿಕಸಿತ ಭಾರತ್ ಗ್ರಾಮೀಣ ಮಿಷನ್ ಹಾಗೂ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಯೋಜನೆಗಳ ಅನುಷ್ಠಾನದಲ್ಲಿನ ಪ್ರಗತಿ, ಬಾಕಿ ಇರುವ ಕಾರ್ಯಗಳು ಹಾಗೂ ಸ್ಥಳೀಯ ಮಟ್ಟದಲ್ಲಿ ಎದುರಾಗುತ್ತಿರುವ ಸಮಸ್ಯೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ಗ್ರಾಮೀಣ ಪ್ರದೇಶದಲ್ಲಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಇಲಾಖೆಗಳ ನಡುವೆ ಸಮನ್ವಯ ಅಗತ್ಯ.

ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ವಿಳಂಬವಿಲ್ಲದೆ ತಲುಪುವಂತೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ, ಯೋಜನಾ ನಿರ್ದೇಶಕ ಬಿ.ಎಸ್. ರಾಠೋಡ, ಸಹಾಯಕ ಕಾರ್ಯದರ್ಶಿ ಅಜಯ್ ಎನ್. ಸೇರಿದಂತೆ ಜಿಲ್ಲೆಯ ವಿವಿಧ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ವಿಬಿ-ಜಿ-ರಾಮ್-ಜಿ ಯೋಜನೆಯ ಸಿಬ್ಬಂದಿ ಉಪಸ್ಥಿತರಿದ್ದರು.



### ಎಚ್.ಕೆ. ಪಾಟೀಲರಿಗೆ ಅನಿಲ ಮೆಣಸಿನಕಾಯಿ ಪ್ರಶ್ನೆ

# ಬರಕ್ಕೆ ಡೆಡ್‌ಲೈನ್; ನೀರಿಗೆ 50 ವರ್ಷ?




> ಬರಗಾಲಕ್ಕೆ ರಾಜೀನಾಮೆಯ ಗಡುವು ನೀಡಿದವರು, 50 ವರ್ಷಗಳಿಂದ ಕುಡಿಯುವ ನೀರಿಗಾಗಿ ಪರದಾಡುತ್ತಿರುವ ಗದಗ-ಬೆಟಗೇರಿ ಜನರಿಗಾಗಿ ಇದುವರೆಗೆ ಏಕೆ ರಾಜೀನಾಮೆ ನೀಡಲಿಲ್ಲ?
>
> – ಅನಿಲ ಮೆಣಸಿನಕಾಯಿ, ಬಿಜೆಪಿ ಮುಖಂಡ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲ್ಲೂಕನ್ನು ಅಕ್ಟೋಬರ್ 10ರೊಳಗೆ ಬರಪೀಡಿತ ಪ್ರದೇಶವೆಂದು ಘೋಷಿಸದಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಹೇಳಿರುವ ಎಚ್.ಕೆ. ಪಾಟೀಲರು, ಗದಗ-ಬೆಟಗೇರಿ ಅವಳಿ ನಗರದ ದಶಕಗಳ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಇದೇ ರೀತಿಯ ಗಡುವು ಏಕೆ ನೀಡಲಿಲ್ಲ ಎಂದು ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಪ್ರಶ್ನಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅವಳಿ ನಗರದಲ್ಲಿ ಹಲವು ವರ್ಷಗಳಿಂದ ಕುಡಿಯುವ ನೀರಿನ ಸಮಸ್ಯೆ ಮುಂದುವರಿದಿದೆ. ನಗರದ ಹಲವು ಪ್ರದೇಶಗಳಲ್ಲಿ 20ರಿಂದ 30 ದಿನಗಳಿಗೊಮ್ಮೆ ನೀರು ಪೂರೈಕೆಯಾಗುತ್ತಿದೆ ಎಂಬ ದೂರುಗಳಿವೆ. ಇದರಿಂದ ಮಹಿಳೆಯರು, ಮಕ್ಕಳು, ಹಿರಿಯರು ಹಾಗೂ ಬಡ ಕುಟುಂಬಗಳು ನೀರಿಗಾಗಿ ಪರದಾಡುವ ಪರಿಸ್ಥಿತಿ ಮುಂದುವರಿದಿದೆ ಎಂದು ತಿಳಿಸಿದ್ದಾರೆ.

ಎಚ್.ಕೆ. ಪಾಟೀಲರು ಹಲವು ಬಾರಿ ಶಾಸಕರಾಗಿ, ಸಚಿವರಾಗಿ ಹಾಗೂ ವಿವಿಧ ಪ್ರಮುಖ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾರೆ.

ಇಷ್ಟೊಂದು ದೀರ್ಘ ರಾಜಕೀಯ ಅನುಭವ ಮತ್ತು ಅಧಿಕಾರದ ಅವಕಾಶಗಳಿದ್ದರೂ ಗದಗ-ಬೆಟಗೇರಿ ನಗರದ ಶಾಶ್ವತ ಕುಡಿಯುವ ನೀರಿನ ಸಮಸ್ಯೆಗೆ ಇನ್ನೂ ಅಂತಿಮ ಪರಿಹಾರ ಏಕೆ ದೊರೆತಿಲ್ಲ ಎಂಬುದನ್ನು ಜನತೆಗೆ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಬರಗಾಲ ಘೋಷಣೆಗೆ ಗಡುವು ನೀಡಿರುವ ಎಚ್.ಕೆ. ಪಾಟೀಲರು, ಮೂಲಭೂತ ಸೌಲಭ್ಯವಾಗಿರುವ ಕುಡಿಯುವ ನೀರಿಗಾಗಿ ಜನರು ವರ್ಷಗಳಿಂದ ಪರದಾಡುತ್ತಿರುವಾಗ ಇದೇ ರೀತಿಯ ಕಾಲಮಿತಿ ಏಕೆ ನಿಗದಿಪಡಿಸಲಿಲ್ಲ ಎಂದು ಪ್ರಶ್ನಿಸಿದ್ದಾರೆ.

**ಜನರ ಪ್ರಶ್ನೆಗಳಿಗೆ ಉತ್ತರ ಎಲ್ಲಿದೆ?**

ಅವಳಿ ನಗರಕ್ಕೆ ನಿಯಮಿತ ಕುಡಿಯುವ ನೀರು ಪೂರೈಸುವ ಶಾಶ್ವತ ಯೋಜನೆ ಯಾವಾಗ ಪೂರ್ಣಗೊಳ್ಳಲಿದೆ? ಕಳೆದ ಹಲವು ದಶಕಗಳಲ್ಲಿ ನೀರಿನ ಯೋಜನೆಗಳಿಗೆ ಎಷ್ಟು ಹಣ ಮಂಜೂರಾಗಿ, ಎಷ್ಟು ಖರ್ಚಾಗಿದೆ? ಯೋಜನೆಗಳ ವಿಳಂಬಕ್ಕೆ ಕಾರಣವೇನು? 24x7 ನೀರು ಪೂರೈಕೆ ಯೋಜನೆಗೆ ನಿಗದಿತ ಕಾಲಮಿತಿ ಏನು ಎಂಬುದನ್ನು ಸರ್ಕಾರ ಹಾಗೂ ಜನಪ್ರತಿನಿಧಿಗಳು ಸ್ಪಷ್ಟಪಡಿಸಬೇಕು ಎಂದು ಅನಿಲ ಮೆಣಸಿನಕಾಯಿ ಒತ್ತಾಯಿಸಿದ್ದಾರೆ.

ರೈತರಿಗೆ ಪರಿಹಾರ ದೊರೆಯುವುದು ಅಗತ್ಯ. ಅದೇ ರೀತಿ ಗದಗ-ಬೆಟಗೇರಿ ಜನರ ದಶಕಗಳ ಕುಡಿಯುವ ನೀರಿನ ಸಮಸ್ಯೆಗೂ ಶಾಶ್ವತ ಪರಿಹಾರ ಸಿಗಬೇಕು. ಗಡುವು ಹಾಗೂ ರಾಜಕೀಯ ಹೇಳಿಕೆಗಳಿಗಿಂತ ಜನತೆಗೆ ಸಮಯಬದ್ಧ ಯೋಜನೆ ಮತ್ತು ಶಾಶ್ವತ ಪರಿಹಾರ ಬೇಕಾಗಿದೆ ಎಂದು ಅವರು ಹೇಳಿದ್ದಾರೆ.

### ರಾಷ್ಟ್ರಮಟ್ಟದ ರೋಪ್ ಸ್ಕಿಪ್ಪಿಂಗ್‌ನಲ್ಲಿ

# ಕೆಎಲ್‌ಇ ಶಾಲೆ ಪ್ರಥಮ




**ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರೀಯ ಮಾಧ್ಯಮಿಕ ಶಿಕ್ಷಣ ಮಂಡಳಿ ಆಯೋಜಿಸಿದ್ದ ರಾಷ್ಟ್ರಮಟ್ಟದ ಹಗ್ಗ ಜಿಗಿತ (ಜಂಪ್ ರೋಪ್) ಸ್ಪರ್ಧೆಯಲ್ಲಿ ಗದಗ ನಗರದ ಕೆಎಲ್‌ಇ ಶಾಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಮಹಾರಾಷ್ಟ್ರದ ರಾಹಥ್ ಶಿರಡಿಯಲ್ಲಿರುವ ದ್ರೋಣಾ ಅಕಾಡೆಮಿಯ ಸಹಭಾಗಿತ್ವದಲ್ಲಿ ಸೆ.17ರಿಂದ 20ರವರೆಗೆ ನಡೆದ ರಾಷ್ಟ್ರಮಟ್ಟದ ಜಂಪ್ ರೋಪ್ ಸ್ಪರ್ಧೆಯಲ್ಲಿ ದೇಶದ ವಿವಿಧ ಭಾಗಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಗದಗ ಕೆಎಲ್‌ಇ ಶಾಲೆಯ ವಿದ್ಯಾರ್ಥಿಗಳಾದ ಭಕ್ತಿ ರಾಜಪುರೋಹಿತ, ಧನ್ಯಾ ಹೊಸೂರ, ಪೂರ್ವಿ ನಂದರಗಿ ಹಾಗೂ ಇರ್ಫಾನಾಜ್ ಅವರು ಡಬಲ್ ಡಚ್ ಸ್ಪೀಡ್ ರಿಲೇ ಮತ್ತು ಡಬಲ್ ಡಚ್ ಫೇರ್ ಸ್ಪೀಡ್ ವಿಭಾಗಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಅತಿ ಹೆಚ್ಚು ಅಂಕಗಳಿಸುವ ಮೂಲಕ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಆಡಳಿತ ಮಂಡಳಿ, ಪ್ರಾಂಶುಪಾಲರು ಹಾಗೂ ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದಾರೆ. ವಿದ್ಯಾರ್ಥಿಗಳಿಗೆ ತರಬೇತಿ ನೀಡಿ ಮಾರ್ಗದರ್ಶನ ಮಾಡಿದ ದೈಹಿಕ ಶಿಕ್ಷಣ ಶಿಕ್ಷಕರಾದ ರವೀಂದ್ರ ಗಡಾದ ಹಾಗೂ ಜ್ಯೋತಿ ಹದ್ಲಿ ಅವರಿಗೂ ಶಾಲೆಯ ವತಿಯಿಂದ ಅಭಿನಂದನೆ ಸಲ್ಲಿಸಲಾಯಿತು.

### ಸ್ಟಾರ್ಟ್‌ಅಪ್‌ಗಳಿಂದ ಕೃಷಿ ತಂತ್ರಜ್ಞಾನಗಳ ನೇರ ಪ್ರಾತ್ಯಕ್ಷಿಕೆ

# ಧಾರವಾಡ ಕೃಷಿಮೇಳದಲ್ಲಿ ಸ್ಮಾರ್ಟ್ ಫಾರ್ಮಿಂಗ್

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಸೆ.25ರಿಂದ 28ರವರೆಗೆ ನಡೆಯಲಿರುವ ಕೃಷಿಮೇಳದಲ್ಲಿ ಈ ಬಾರಿ ಕೃಷಿ ನವೋದ್ಯಮಗಳ ಸ್ಟಾರ್ಟ್‌ಅಪ್‌ಗಳಿಂದ 'ಸ್ಮಾರ್ಟ್ ಫಾರ್ಮಿಂಗ್' ತಂತ್ರಜ್ಞಾನಗಳ ನೇರ ಪ್ರಾತ್ಯಕ್ಷಿಕೆ ಆಯೋಜಿಸಲಾಗಿದೆ.

ಕೃಷಿ ತಂತ್ರಜ್ಞಾನಗಳ ಬಳಕೆ, ರೈತರಿಗೆ ಅವುಗಳ ಪ್ರಯೋಜನ ಮತ್ತು ಕಾರ್ಯನಿರ್ವಹಣೆಯನ್ನು ನೇರವಾಗಿ ತಿಳಿಸುವ ಉದ್ದೇಶದಿಂದ ಒಂದು ಎಕರೆ ಪ್ರದೇಶದಲ್ಲಿ ವಿವಿಧ ಸ್ಮಾರ್ಟ್ ಕೃಷಿ ತಂತ್ರಜ್ಞಾನಗಳನ್ನು ಪ್ರದರ್ಶಿಸಲಾಗುತ್ತಿದೆ. ಇದರೊಂದಿಗೆ ಸ್ಟಾರ್ಟ್‌ಅಪ್ ಪೆವಿಲಿಯನ್ ಕೂಡ ಸಿದ್ಧಪಡಿಸಲಾಗಿದೆ.

ಖಂಖ ಆಧಾರಿತ ಕೊಳವೆಬಾವಿ ನೀರು ನಿರ್ವಹಣಾ ವ್ಯವಸ್ಥೆ, ಮೊಳಕೆ ಹಂತದ ಕಳೆ ತೆಗೆಯುವ ಯಂತ್ರ, ದ್ರಾಕ್ಷಿ ಬೆಳೆಗೆ ಕೃಷಿ ಸಲಹೆ ನೀಡುವ ಆ್ಯಪ್, ಸ್ವಯಂಚಾಲಿತ ಸಿಂಪಡಣೆ ಡ್ರೋನ್, ಸೌರಶಕ್ತಿಚಾಲಿತ ಮೂರು ಸಾಲಿನ ಕಡಲೆ ನಿಪ್ಪಿಂಗ್ ಯಂತ್ರ, ಬ್ಯಾಟರಿ ಹಾಗೂ ಮೊಬೈಲ್ ಮೂಲಕ ಕಾರ್ಯನಿರ್ವಹಿಸುವ ಸ್ವಯಂಚಾಲಿತ ವಾಲ್ವ್, ೦ಖ ಆಧಾರಿತ ಕೃಷಿ ತಂತ್ರಜ್ಞಾನ, ಹೈಡ್ರೋಪೋನಿಕ್ ಮೇವು ಘಟಕ, ಬಾಹ್ಯಾಕಾಶ ಮತ್ತು ೦ಖ ಆಧಾರಿತ ಬೆಳೆ ಮೇಲ್ವಿಚಾರಣೆ ಹಾಗೂ ಸಲಹಾ ವ್ಯವಸ್ಥೆ ಮತ್ತು ಬೀಜ ಮೊಳಕೆಯ ಗುಣಮಟ್ಟ ಪರೀಕ್ಷಿಸುವ ಮೊಬೈಲ್ ಆ್ಯಪ್‌ಗಳು ಪ್ರಮುಖ ಆಕರ್ಷಣೆಯಾಗಿವೆ.

ಸ್ಟಾರ್ಟ್‌ಅಪ್ ಪೆವಿಲಿಯನ್‌ನಲ್ಲಿ ಆಹಾರ ಸಂಸ್ಕರಣೆ ತಂತ್ರಜ್ಞಾನ, ಕೃಷಿ ಯಂತ್ರೋಪಕರಣಗಳು ಹಾಗೂ ಕೃಷಿ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ ಉತ್ಪನ್ನಗಳ ಮಳಿಗೆಗಳು ಇರಲಿವೆ. 308ರಿಂದ 312ರವರೆಗೆ ಸ್ಟಾಲ್‌ಗಳನ್ನು ಸಜ್ಜುಗೊಳಿಸಲಾಗಿದೆ.

ಕೇಂದ್ರ ಸರ್ಕಾರದ ಆರ್‌ಕೆವಿವೈ-ಇನ್ನೋವೇಷನ್ ಮತ್ತು ಕೃಷಿ ಉದ್ಯಮಶೀಲತೆ ಯೋಜನೆಯಡಿ ಪ್ರೋತ್ಸಾಹ ಪಡೆದಿರುವ ಸ್ಟಾರ್ಟ್‌ಅಪ್‌ಗಳ ಮಳಿಗೆಗಳಿಗೆ ರೈತರು ಭೇಟಿ ನೀಡಿ ತಂತ್ರಜ್ಞಾನಗಳು ಹಾಗೂ ಉತ್ಪನ್ನಗಳ ಕುರಿತು ಮಾಹಿತಿ ಪಡೆಯುವಂತೆ ಕೃಷಿ ವಿಶ್ವವಿದ್ಯಾಲಯ ಕೋರಿದೆ.

ಕೃಷಿಕ್ ಕೃಷಿ ನವೋದ್ಯಮ ಪೋಷಣ ಕೇಂದ್ರ ಈವರೆಗೆ 13 ಕೋಹಾರ್ಟ್‌ಗಳನ್ನು ಪೂರ್ಣಗೊಳಿಸಿ 167 ಸ್ಟಾರ್ಟ್‌ಅಪ್‌ಗಳಿಗೆ ಬೆಂಬಲ ನೀಡಿದೆ. ಇದರಲ್ಲಿ 88 ಪೂರ್ವ-ಬೀಜ ಹಂತದ, 71 ಬೀಜ ಹಂತದ ಹಾಗೂ 8 ವಿದ್ಯಾರ್ಥಿ ಸ್ಟಾರ್ಟ್‌ಅಪ್‌ಗಳು ಸೇರಿವೆ.

ಕೃಷಿಕ್ ಕೇಂದ್ರವು ಒಟ್ಟು ₹16.76 ಕೋಟಿ ಅನುದಾನವನ್ನು ಶಿಫಾರಸು ಮಾಡಿದ್ದು, ಬೆಂಬಲಿತ ಸ್ಟಾರ್ಟ್‌ಅಪ್‌ಗಳು ₹158 ಕೋಟಿಗೂ ಹೆಚ್ಚು ಆದಾಯ ಗಳಿಸಿವೆ. 1,500ಕ್ಕೂ ಹೆಚ್ಚು ಉದ್ಯೋಗಾವಕಾಶಗಳನ್ನು ಸೃಷ್ಟಿಸಲಾಗಿದ್ದು, 32 ಮಹಿಳಾ ನೇತೃತ್ವದ ಸ್ಟಾರ್ಟ್‌ಅಪ್‌ಗಳಿಗೆ ಬೆಂಬಲ ನೀಡಲಾಗಿದೆ. ಈ ಸ್ಟಾರ್ಟ್‌ಅಪ್‌ಗಳ ಮೂಲಕ 11 ಲಕ್ಷಕ್ಕೂ ಹೆಚ್ಚು ರೈತರು ಪ್ರಯೋಜನ ಪಡೆದಿದ್ದು, 40ಕ್ಕೂ ಹೆಚ್ಚು ಪೇಟೆಂಟ್‌ಗಳನ್ನು ಪಡೆಯಲಾಗಿದೆ.

### ಮದ್ಯಮುಕ್ತ ಕನಸಿನ ಸಾಕಾರಕ್ಕೆ ಎಲ್ಲರ ಸಹಕಾರ ಅಗತ್ಯ: ಮಾಜಿ ಶಾಸಕ

# ದುಶ್ಚಟಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ




**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಆಶಯದಂತೆ ಕಳೆದ 35 ವರ್ಷಗಳಿಂದ ಮದ್ಯವರ್ಜನ ಶಿಬಿರ ಸೇರಿದಂತೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಮಾಜವನ್ನು ದುಶ್ಚಟಮುಕ್ತಗೊಳಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ. ಇಂತಹ ಸಮಾಜಮುಖಿ ಕಾರ್ಯಗಳಿಗೆ ಪ್ರತಿಯೊಬ್ಬರೂ ಅಗತ್ಯ ಸಹಕಾರ ನೀಡಬೇಕು ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹೇಳಿದರು.

ಶಿರಹಟ್ಟಿಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ ಹಾಗೂ ಅಖಿಲ ಕರ್ನಾಟಕ ಜಿಲ್ಲಾ ಜನ ಜಾಗೃತಿ ವೇದಿಕೆ ಆಶ್ರಯದಲ್ಲಿ ಅ.3ರಂದು ನಡೆಯಲಿರುವ ಜಿಲ್ಲಾ ಮಟ್ಟದ ಗಾಂಧಿ ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಸ್ಥೆಯ ವತಿಯಿಂದ ಈವರೆಗೆ ಸುಮಾರು 1.80 ಲಕ್ಷ ಜನರನ್ನು ದುಶ್ಚಟಗಳಿಂದ ಮುಕ್ತಗೊಳಿಸುವ ಪ್ರಯತ್ನ ನಡೆಸಲಾಗಿದೆ. ಮದ್ಯಪಾನದ ಚಟಕ್ಕೆ ಒಳಗಾದವರಲ್ಲಿ ಶೇ.70ರಷ್ಟು ಮಂದಿ ಕುಡಿತ ತ್ಯಜಿಸಿ ನೆಮ್ಮದಿಯ ಜೀವನ ನಡೆಸುತ್ತಿದ್ದಾರೆ ಎಂಬ ಮಾಹಿತಿ ಇದೆ. ಯುವಜನತೆ ಸೇರಿದಂತೆ ಸಮಾಜದ ಎಲ್ಲ ವರ್ಗದವರು ಮದ್ಯಪಾನ, ಧೂಮಪಾನ ಹಾಗೂ ಇತರ ದುಶ್ಚಟಗಳಿಂದ ದೂರವಿದ್ದು, ಆರೋಗ್ಯಕರ ಮತ್ತು ಶಿಸ್ತುಬದ್ಧ ಜೀವನ ನಡೆಸುವ ಮೂಲಕ ದುಶ್ಚಟಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಶಿವಾನಂದ ಬೆಂತೂರ ಮಾತನಾಡಿ, ಮದ್ಯಪಾನ, ಧೂಮಪಾನ ಹಾಗೂ ಮಾದಕ ವಸ್ತುಗಳ ಸೇವನೆ ಸೇರಿದಂತೆ ವಿವಿಧ ದುಶ್ಚಟಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆ. ದುಶ್ಚಟಗಳು ವ್ಯಕ್ತಿಯ ಆರೋಗ್ಯದ ಮೇಲೆ ಮಾತ್ರವಲ್ಲದೆ ಕುಟುಂಬದ ನೆಮ್ಮದಿ ಹಾಗೂ ಆರ್ಥಿಕ ಸ್ಥಿತಿಯ ಮೇಲೂ ದುಷ್ಪರಿಣಾಮ ಬೀರುತ್ತವೆ ಎಂದರು.

ಯುವಕರು ದುಶ್ಚಟಗಳಿಗೆ ಬಲಿಯಾಗದಂತೆ ಪೋಷಕರು, ಶಿಕ್ಷಕರು ಹಾಗೂ ಸಮಾಜದ ಹಿರಿಯರು ಜಾಗೃತಿ ಮೂಡಿಸಬೇಕು. ಯುವಶಕ್ತಿಯೇ ದೇಶದ ಭವಿಷ್ಯವಾಗಿದ್ದು, ಶಿಕ್ಷಣ, ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಸಮಾಜಮುಖಿ ಚಟುವಟಿಕೆಗಳಲ್ಲಿ ಯುವಕರು ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಶಿರಹಟ್ಟಿ ಪಟ್ಟಣದಲ್ಲಿ ಅ.3ರಂದು ಜಿಲ್ಲಾ ಮಟ್ಟದ ಗಾಂಧಿ ಜಯಂತಿ ಕಾರ್ಯಕ್ರಮ ನಡೆಯಲಿದೆ. ಅಂದು ಬೆಳಗ್ಗೆ ಎಫ್.ಎಂ. ಡಬಾಲಿ ಹೈಸ್ಕೂಲ್ ಮೈದಾನದಿಂದ ಬೃಹತ್ ಜಾಗೃತಿ ಮೆರವಣಿಗೆ ಆರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶ್ರೀ ಜಗದ್ಗುರು ಫಕೀರೇಶ್ವರ ಮಠ ತಲುಪಲಿದೆ. ಬಳಿಕ ಮಠದ ಆವರಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಜಿಲ್ಲೆಯ ಏಳು ತಾಲೂಕುಗಳಿಂದ 5 ಸಾವಿರಕ್ಕೂ ಅಧಿಕ ಜನರು ಪಾಲ್ಗೊಳ್ಳುವ ನಿರೀಕ್ಷೆಯಿದ್ದು, ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ನಡೆಸಲು ವಿವಿಧ ಹಂತದ ಸಮಿತಿಗಳನ್ನು ರಚಿಸಲಾಗಿದೆ ಎಂದು ಶಿವಾನಂದ ಬೆಂತೂರ ತಿಳಿಸಿದರು.

ಜಿಲ್ಲಾ ಜನಜಾಗೃತಿ ವೇದಿಕೆ ಕಾರ್ಯದರ್ಶಿ ಕೇಶವ ದೇವಾಂಗ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಯೋಜನಾಧಿಕಾರಿ ಪುನಿತ ಓಲೇಕಾರ, ಹುಮಾಯೂನ ಮಾಗಡಿ, ಭೀಮಸಿಂಗ್ ರಾಠೋಡ, ತಿಪ್ಪಣ್ಣ ಕೊಂಚಿಗೇರಿ, ಫಕ್ಕೀರೇಶ ರಟ್ಟಿಹಳ್ಳಿ, ಫಕ್ಕೀರೇಶ ಮ್ಯಾಟಣ್ಣವರ, ಹೊನ್ನಪ್ಪ ಶಿರಹಟ್ಟಿ, ಮಹಾಂತೇಶ ದಶಮನಿ, ವೀರಣ್ಣ ಮಜ್ಜಗಿ, ಭಾಗ್ಯಶ್ರೀ ಬಾಬಣ್ಣ, ಅಜ್ಜುಗೌಡ್ರ ಪಾಟೀಲ, ಪ್ರಕಾಶ ಬೋರಶೆಟ್ಟರ, ಅಮರಪ್ಪ ಗಾಂಜಿ, ತಿಪ್ಪಣ್ಣ ಸಂಶಿ, ಎಸ್.ಬಿ. ಮಹಾಜನಶೆಟ್ಟರ, ಬಿ.ಡಿ. ಪಲ್ಲೇದ ಹಲವರು ಉಪಸ್ಥಿತರಿದ್ದರು.

# ದಲಿತರ ಮೇಲಿನ ದೌರ್ಜನ್ಯ, ಕೊಲೆ ಖಂಡಿಸಿ ಪ್ರತಿಭಟನೆ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯದಲ್ಲಿ ದಲಿತರ ಮೇಲೆ ನಡೆಯುತ್ತಿರುವ ಕೊಲೆ, ದೌರ್ಜನ್ಯ ಹಾಗೂ ದಲಿತ ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳನ್ನು ಖಂಡಿಸಿ, ತಪ್ಪಿತಸ್ಥರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ ತಾಲೂಕು ಘಟಕದ ಪದಾಧಿಕಾರಿಗಳು ಸೋಮವಾರ ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಿ ಉಪ ತಹಸೀಲ್ದಾರ್ ಶಿವಕುಮಾರಗೌಡ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ತಾಲೂಕು ಪ್ರಧಾನ ಕಾರ್ಯದರ್ಶಿ ಸರ್ದಾರ್ ಹುಲಿಗಮ್ಮ ಮಾತನಾಡಿ, ದಲಿತ ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳು ನಿರಂತರವಾಗಿ ನಡೆಯುತ್ತಿದ್ದರೂ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು. ದಲಿತ ಕುಟುಂಬಗಳ ಮೇಲೆ ದೌರ್ಜನ್ಯ ಹಾಗೂ ಕೊಲೆ ಪ್ರಕರಣಗಳು ನಡೆಯುತ್ತಿದ್ದು, ಬಡವರು, ಕೂಲಿ ಕಾರ್ಮಿಕರು ಮತ್ತು ನಿರ್ಗತಿಕರು ಮೂಲಸೌಕರ್ಯಗಳ ಕೊರತೆಯಿಂದ ಸಂಕಷ್ಟ ಎದುರಿಸುತ್ತಿದ್ದಾರೆ ಎಂದರು. ಕೂಲಿ ಕಾರ್ಮಿಕರು ಹಾಗೂ ನಿರ್ಗತಿಕರಿಗೆ ವಸತಿ ಕಲ್ಪಿಸಬೇಕು. ದಲಿತರ ಮೇಲೆ ದೌರ್ಜನ್ಯ ಎಸಗುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು, ನೊಂದ ಕುಟುಂಬಗಳಿಗೆ ತಲಾ ₹50 ಲಕ್ಷ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ತಾಲೂಕಿನ ಲೋಕಪ್ಪನಹೊಲ ಗ್ರಾಮದಲ್ಲಿ 90ಕ್ಕೂ ಹೆಚ್ಚು ಒಂಟಿ ಮಹಿಳೆಯರು ಸಂಕಷ್ಟದಲ್ಲಿದ್ದು, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕವಾಗಿ ಮೀಸಲಿಟ್ಟಿರುವ ಎರಡು ಎಕರೆ ಜಮೀನಿನಲ್ಲಿ ಅರ್ಹ ಫಲಾನುಭವಿಗಳಿಗೆ ವಸತಿ ನಿವೇಶನ ಒದಗಿಸಬೇಕು ಎಂದು ಮನವಿ ಮಾಡಿದರು.

ವಿಧವಾ ವೇತನ, ವೃದ್ಧಾಪ್ಯ ವೇತನ ಹಾಗೂ ಅಂಗವಿಕಲರ ಮಾಸಾಶನ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಹಣ ಆರು ತಿಂಗಳಿಂದ ಸ್ಥಗಿತಗೊಂಡಿದ್ದು, ಕೂಡಲೇ ಬಾಕಿ ಹಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜನವಾದಿ ಮಹಿಳಾ ಸಂಘಟನೆಯ ಸಹ ಕಾರ್ಯದರ್ಶಿ ಕಾಳಿ ಅಂಬಿಕಾ, ಮಹಿಳಾ ಮುಖಂಡರಾದ ನಾಗಮ್ಮ, ಹನುಮಂತಮ್ಮ, ಗೋಣಮ್ಮ, ದುರ್ಗಮ್ಮ, ಐನಳ್ಳಿ ಹನುಮಕ್ಕ, ಉಪ್ಪಾರ್ ಹನುಮಮ್ಮ, ಕೊಡ್ಲಿ ಹನುಮಮ್ಮ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ಪ್ರತಿ ಮಗುವಿನ ಕಲಿಕಾ ಪ್ರಗತಿಗೆ ವೈಯಕ್ತಿಕ ಗಮನ ನೀಡಲು ಡಿಡಿಪಿಐ ಸೂಚನೆ

# ಎಸ್‌ಎಸ್‌ಎಲ್‌ಸಿ ಫಲಿತಾಂಶಕ್ಕೆ 'ಮಿಷನ್ 60+' ಚುರುಕು



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಮತ್ತಷ್ಟು ಗುಣಾತ್ಮಕವಾಗಿ ಸುಧಾರಿಸುವ ಉದ್ದೇಶದಿಂದ ಶಿಕ್ಷಣ ಇಲಾಖೆ ಕಾರ್ಯತಂತ್ರ ರೂಪಿಸಿದ್ದು, ಪ್ರತಿ ವಿದ್ಯಾರ್ಥಿಯ ಕಲಿಕಾ ಪ್ರಗತಿಯ ಮೇಲೆ ವೈಯಕ್ತಿಕ ಗಮನಹರಿಸಿ ಫಲಿತಾಂಶ ಹೆಚ್ಚಿಸುವಂತೆ ಡಿಡಿಪಿಐ ಆರ್.ಎಸ್. ಬುರಡಿ ಮುಖ್ಯ ಶಿಕ್ಷಕರಿಗೆ ಕರೆ ನೀಡಿದರು.

ನಗರದ ಡಂಬಳನಾಕಾದಲ್ಲಿರುವ ಪ್ರಜಾಪಿತಾ ಬ್ರಹ್ಮಕುಮಾರಿ ಈಶ್ವರೀಯ ವಿದ್ಯಾಲಯದಲ್ಲಿ ಜಿಲ್ಲೆಯ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗಾಗಿ ಸೋಮವಾರ ಆಯೋಜಿಸಿದ್ದ ಒಂದು ದಿನದ ವಿಶೇಷ ಶಿಬಿರದಲ್ಲಿ ಅವರು ಮಾತನಾಡಿದರು.

ಸಂಕಲನಾತ್ಮಕ ಪರೀಕ್ಷೆ–1ಕ್ಕೆ ಸಂಬಂಧಿಸಿದ ಕಾರ್ಯಾಚರಣೆ ಮಾರ್ಗಸೂಚಿ, ಪ್ರತಿ ಮಗುವಿನ ಕಲಿಕಾ ಪ್ರಗತಿಯ ದಾಖಲಾತಿ, 'ಮಿಷನ್ 60+', ಕಲಿಕಾ ಕೊರತೆ ಹೊಂದಿರುವ ಹಾಗೂ ಹೆಚ್ಚುವರಿ ಶೈಕ್ಷಣಿಕ ಬೆಂಬಲ ಅಗತ್ಯವಿರುವ ಮಕ್ಕಳಿಗಾಗಿ ವಿಶೇಷ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ನಿಧಾನ ಕಲಿಕೆಯ ಮಕ್ಕಳಿಗೆ ಅಗತ್ಯ ಶೈಕ್ಷಣಿಕ ನೆರವು ನೀಡುವುದರ ಜೊತೆಗೆ ಮನೆ ಭೇಟಿ ಹಾಗೂ 'ಓದು ಮನೆ' ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ವಿದ್ಯಾರ್ಥಿಗಳ ಕಲಿಕಾ ಮಟ್ಟವನ್ನು ನಿರಂತರವಾಗಿ ಪರಿಶೀಲಿಸಿ, ಅಗತ್ಯವಿರುವ ಕಡೆ ಪೂರಕ ಬೋಧನೆ ನೀಡಬೇಕು ಎಂದರು.

ಜಿಲ್ಲೆಯ ಕೆಪಿಎಸ್ ಹಾಗೂ ಪಿಎಂ ಮಾದರಿ ಶಾಲೆಗಳು ಉತ್ತಮ ಕಲಿಕಾ ವಾತಾವರಣ ನಿರ್ಮಿಸಿ ಇತರ ಶಾಲೆಗಳಿಗೆ ಮಾದರಿಯಾಗಬೇಕು. ಕೌಶಲ್ಯ ಶಿಕ್ಷಣ, ಮೌಲ್ಯ ಶಿಕ್ಷಣ, ಮಕ್ಕಳ ಸುರಕ್ಷತೆ, ಬಾಲ್ಯ ವಿವಾಹ ತಡೆ, ಪೋಕ್ಸೋ ಕಾಯ್ದೆ, ಮಹಿಳೆಯರಿಗಾಗಿ ದೂರು ನಿವಾರಣಾ ಸಮಿತಿ, ನಶಾಮುಕ್ತ ಶಾಲಾ ವಾತಾವರಣ, ಏಂಂಒಖ ಹಾಗೂ ವಿದ್ಯಾರ್ಥಿಗಳ ನಿರಂತರ ಹಾಜರಾತಿ ಕುರಿತು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು.

> ಮಕ್ಕಳ ಸುರಕ್ಷತೆಯೊಂದಿಗೆ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಮೊದಲ ಆದ್ಯತೆ. ಈ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಮತ್ತಷ್ಟು ಗುಣಾತ್ಮಕವಾಗಿ ಸುಧಾರಿಸಲು ಪ್ರತಿಯೊಬ್ಬ ವಿದ್ಯಾರ್ಥಿಯ ಕಲಿಕಾ ಪ್ರಗತಿಗೆ ವೈಯಕ್ತಿಕ ಗಮನ ನೀಡಿ, ಅಗತ್ಯವಿರುವ ಮಕ್ಕಳಿಗೆ ವಿಶೇಷ ಶೈಕ್ಷಣಿಕ ಬೆಂಬಲ ನೀಡಬೇಕು. ಎಲ್ಲರೂ ಸಂಘಟಿತವಾಗಿ ಕಾರ್ಯನಿರ್ವಹಿಸುವ ಮೂಲಕ ಉತ್ತಮ ಫಲಿತಾಂಶ ಸಾಧಿಸಬೇಕು.
>
> – ಆರ್.ಎಸ್. ಬುರಡಿ, ಡಿಡಿಪಿಐ

ಜಿಲ್ಲಾ ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಎಚ್.ಬಿ. ರೆಡ್ಡೆರ ಅವರು ಸಂಕಲನಾತ್ಮಕ ಪರೀಕ್ಷೆ–1 ಹಾಗೂ ಅರ್ಧವಾರ್ಷಿಕ ಪರೀಕ್ಷೆಗೆ ಸಂಬಂಧಿಸಿದ ಕಾರ್ಯಾಚರಣೆ ಮಾರ್ಗಸೂಚಿಗಳನ್ನು ವಿವರಿಸಿದರು. ಪರೀಕ್ಷಾ ಸಿದ್ಧತೆ, ವಿದ್ಯಾರ್ಥಿಗಳ ಕಲಿಕಾ ಪ್ರಗತಿ ಹಾಗೂ ಫಲಿತಾಂಶ ಸುಧಾರಣೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಪಿಪಿಟಿ ಮೂಲಕ ಮಾಹಿತಿ ನೀಡಿದರು.

ಸಮಗ್ರ ಶಿಕ್ಷಣ ಕರ್ನಾಟಕದ ಎಪಿಸಿಓ ಶಿವಕುಮಾರ ಕುರಿಯವರ ಅವರು ಸಮಗ್ರ ಶಿಕ್ಷಣ ಕರ್ನಾಟಕದ ವಿವಿಧ ಚಟುವಟಿಕೆಗಳು, ಇಐಟಿ ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವ ಕುರಿತು ಮಾಹಿತಿ ನೀಡಿದರು. ಉಪನ್ಯಾಸಕ ಕೊಟ್ರೇಶ್ ವಿಭೂತಿ ರಾಷ್ಟ್ರೀಯ ಜನಸಂಖ್ಯಾ ಶಿಕ್ಷಣ ಕಾರ್ಯಕ್ರಮದಡಿ ನಡೆಯುವ ವಿವಿಧ ಸ್ಪರ್ಧೆಗಳ ಕುರಿತು ಮಾಹಿತಿ ನೀಡಿದರು. ಸುಧಾ ಬನ್ನಿಕಲ್ ಎಫ್‌ಎಲ್‌ಎನ್ ಹಾಗೂ ಬಿ.ಎಫ್. ಅರವಟಗಿ ವೃತ್ತಿ ಮಾರ್ಗದರ್ಶನ ಕುರಿತು ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಯಟ್ ಪ್ರಾಂಶುಪಾಲ ಕೆ.ಡಿ. ಬಡಿಗೇರ ಅವರು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಿಕ್ಷಣದ ಮುಖ್ಯವಾಹಿನಿಗೆ ತರಲು ಮನೆ ಭೇಟಿ, 'ಓದು ಮನೆ' ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಅಗತ್ಯವಿದೆ ಎಂದರು.

ಕಾರ್ಯಕ್ರಮದ ಆರಂಭದಲ್ಲಿ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಜಯಂತಿ ಅಕ್ಕ ಅವರು ಮಾನವೀಯ, ನೈತಿಕ, ಆಧ್ಯಾತ್ಮಿಕ ಹಾಗೂ ದೈವೀ ಮೌಲ್ಯಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಶಿಕ್ಷಣ ಇಲಾಖೆಯ ಎಂ.ಎಚ್. ಕಂಬಳಿ, ಡಿವೈಪಿಸಿ (ಕಾರ್ಯಕ್ರಮ), ರವಿಪ್ರಕಾಶ್ ಎಸ್.ಎನ್. (ಗುಣಮಟ್ಟ), ಎಸ್.ಎನ್. ಪಾಟೀಲ ಸೇರಿದಂತೆ ಜಿಲ್ಲೆಯ 320ಕ್ಕೂ ಅಧಿಕ ಪ್ರೌಢಶಾಲಾ ಮುಖ್ಯ ಶಿಕ್ಷಕರು ಶಿಬಿರದಲ್ಲಿ ಭಾಗವಹಿಸಿದ್ದರು.

---

## ಪುಟ್ಟರಾಜರ ಸ್ಮರಣೆ: ಮಹಾಪೂಜೆ, ಅನ್ನಸಂತರ್ಪಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗಾನಯೋಗಿ, ಶಿವಯೋಗಿ ಹಾಗೂ ಸಂಗೀತ ಲೋಕದ ಧ್ರುವತಾರೆ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ 16ನೇ ವರ್ಷದ ಪುಣ್ಯಸ್ಮರಣೋತ್ಸವದ ಅಂಗವಾಗಿ ನಗರದ ಮುಳಗುಂದ ರಸ್ತೆಯಲ್ಲಿರುವ ಶ್ರೀ ಪಂಡಿತ ಪುಟ್ಟರಾಜ ಚೈನೀಸ್ ಕಾರ್ನರ್‌ನಲ್ಲಿ ಮಹಾಪೂಜೆ ಹಾಗೂ ಮಹಾ ಅನ್ನಸಂತರ್ಪಣೆ ಭಕ್ತಿಭಾವದಿಂದ ನೆರವೇರಿತು.

ಕಳೆದ 16 ವರ್ಷಗಳಿಂದ ಪುಟ್ಟರಾಜ ಕವಿ ಗವಾಯಿಗಳವರ ಪುಣ್ಯಸ್ಮರಣೋತ್ಸವದ ಅಂಗವಾಗಿ ಇಲ್ಲಿ ಮಹಾಪೂಜೆ ಹಾಗೂ ಅನ್ನಸಂತರ್ಪಣೆ ನಿರಂತರವಾಗಿ ನಡೆಯುತ್ತಿದ್ದು, ಈ ವರ್ಷವೂ ಕಾರ್ಯಕ್ರಮ ಮುಂದುವರಿಯಿತು.

ಮಲ್ಲಸಮುದ್ರಗಿರಿ ಮಠದ ಶ್ರೀ ಫಕೀರೇಶ್ವರ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಹಾಗೂ ಗದುಗಿನ ವೀರೇಶ್ವರ ಪುಣ್ಯಾಶ್ರಮದ ಶಿಷ್ಯ ಬಳಗದ ಉಪಸ್ಥಿತಿಯಲ್ಲಿ ಮಹಾಪೂಜೆ ನೆರವೇರಿತು. ಶ್ರೀ ಲಲಿತಾಂಬ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ ಬ್ಯಾಂಕ್ ವ್ಯವಸ್ಥಾಪಕ ಗುರು ಕುಲಕರ್ಣಿ, ವಿವೇಕ್ ಕುಲಕರ್ಣಿ ಸೇರಿದಂತೆ ಗಣ್ಯರು ಪಾಲ್ಗೊಂಡಿದ್ದರು.

ಮಹಾ ಅನ್ನಸಂತರ್ಪಣೆಗೆ ಗದಗ ಜಿಲ್ಲಾ ಯುವ ನಾಯಕ ಹಾಗೂ ಕಾಂಗ್ರೆಸ್ ಯುವ ಘಟಕದ ಜಿಲ್ಲಾಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಮತ್ತು ಗದಗ ಮತಕ್ಷೇತ್ರದ ನಾಯಕ ವಿಜಯಕುಮಾರ್ ಗಡ್ಡಿ ಚಾಲನೆ ನೀಡಿದರು.

ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಗೌರವಾಧ್ಯಕ್ಷ ಹಾಗೂ ಮಾಲಿಪಾಟೀಲ್ ಫೌಂಡೇಶನ್ ಟ್ರಸ್ಟ್ ಅಧ್ಯಕ್ಷ ನಿಂಗನಗೌಡ ಎಸ್. ಮಾಲಿಪಾಟೀಲ್ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು.

ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಅಧ್ಯಕ್ಷ ಹನುಮಂತಪ್ಪ ಎಚ್. ಅಬ್ಬಿಗೇರಿ, ಸಮಾಜಮುಖಿ ಸೇವಕಿ ಸುಜಾತ ಹೂಗಾರ್, ಡಾ. ಜಯಕುಮಾರ್ ಬ್ಯಾಳೆ, ಜಾಗೃತ ಗಜಾನನ ಮಂಡಳಿ ಅಧ್ಯಕ್ಷ ಶೇಖರ್‌ಗೌಡ ಮಾಲಿಪಾಟೀಲ್, ಕರವೇ ಜಿಲ್ಲಾ ಉಪಾಧ್ಯಕ್ಷರಾದ ಮಾರುತಿ ಈಳಿಗೆರೆ, ಮುತ್ತಣ್ಣ ಚೌಡಣ್ಣವರ, ಉದ್ಯಮಿಗಳ ಘಟಕದ ಅಧ್ಯಕ್ಷ ಕೃಷ್ಣ ಲಮಾಣಿ, ಜಿಲ್ಲಾ ವಕ್ತಾರ ವಿನಾಯಕ್ ಬದಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಸಂಗೀತ, ಸಾಹಿತ್ಯ ಹಾಗೂ ಆಧ್ಯಾತ್ಮಿಕ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ 16 ವರ್ಷಗಳಿಂದ ಪುಣ್ಯಸ್ಮರಣೋತ್ಸವದ ಅಂಗವಾಗಿ ಮಹಾಪೂಜೆ ಮತ್ತು ಅನ್ನಸಂತರ್ಪಣೆ ನಡೆಸಿಕೊಂಡು ಬರಲಾಗುತ್ತಿದೆ.
>
> – ನಿಂಗನಗೌಡ ಎಸ್. ಮಾಲಿಪಾಟೀಲ್

ವಿದ್ಯಾಶ್ರೀ ಮಾಲಿಪಾಟೀಲ, ಶಶಿಕಲಾ ಮಾಲಿಪಾಟೀಲ, ಕಾಶಮ್ಮ ಮರಿಗೌಡರ, ರೇಷ್ಮಾ ಅಬ್ಬಿಗೇರಿ ಹಾಗೂ ವೀನಶ್ರೀ ಮಾಲಿಪಾಟೀಲ ಸೇರಿದಂತೆ ಹಲವು ಮಹಿಳೆಯರು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಹಾಪೂಜೆಯಲ್ಲಿ ಪಾಲ್ಗೊಂಡು ಅನ್ನಸಂತರ್ಪಣೆಯ ಪ್ರಸಾದ ಸ್ವೀಕರಿಸಿದರು.

---

## ಮಾಸಾಶನಕ್ಕೆ ಒಳಪಟ್ಟ 11 ಪೈಲ್ವಾನರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮೀಣ ಭಾಗದಲ್ಲಿ ಕುಸ್ತಿ ಕ್ರೀಡೆಗೆ ಉತ್ತಮ ಪರಂಪರೆ ಇದ್ದು, ಪೈಲ್ವಾನರನ್ನು ಪ್ರೋತ್ಸಾಹಿಸುವ ಮೂಲಕ ಯುವಕರಲ್ಲಿ ಕ್ರೀಡಾಸಕ್ತಿ ಬೆಳೆಸಬೇಕು. ಸರ್ಕಾರದಿಂದ ಮಾಸಾಶನ ದೊರೆಯುತ್ತಿರುವುದು ಪೈಲ್ವಾನರಿಗೆ ಮತ್ತಷ್ಟು ಉತ್ತೇಜನ ನೀಡಲಿದೆ ಎಂದು ಡಂಬಳ ತೋಂಟದಾರ್ಯ ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಹೇಳಿದರು.

ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ದಾಸೋಹ ಭವನದಲ್ಲಿ ಗದಗ ಜಿಲ್ಲಾ ಪೈಲ್ವಾನರ ಕುಸ್ತಿ ಸಂಘ ಹಾಗೂ ಮುಂಡರಗಿ ತಾಲೂಕು ಪೈಲ್ವಾನರ ಸಂಘದ ವತಿಯಿಂದ ನೂತನವಾಗಿ ಮಾಸಾಶನಕ್ಕೆ ಒಳಪಟ್ಟ 11 ಪೈಲ್ವಾನರಿಗೆ ಆಯೋಜಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.


ಯುವಕರು ಕುಸ್ತಿ ಸೇರಿದಂತೆ ವಿವಿಧ ಕ್ರೀಡೆಗಳಲ್ಲಿ ಹೆಚ್ಚಿನ ಆಸಕ್ತಿ ಬೆಳೆಸಿಕೊಳ್ಳಬೇಕು. ಗ್ರಾಮೀಣ ಭಾಗದಲ್ಲಿರುವ ಪ್ರತಿಭಾವಂತ ಪೈಲ್ವಾನರನ್ನು ಗುರುತಿಸಿ ಅಗತ್ಯ ಪ್ರೋತ್ಸಾಹ ನೀಡಿದರೆ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಪೈಲ್ವಾನರ ಸಂಘದ ಅಧ್ಯಕ್ಷ ದೇವಪ್ಪ ಗಡೇದ, ಉಪಾಧ್ಯಕ್ಷ ದೇವಪ್ಪ ಯಲಿಗಾರ, ಹಿರಿಯ ಕುಸ್ತಿಪಟುಗಳಾದ ಮರಿತೇಮಪ್ಪ ಆದಮ್ಮನವರ, ಈರಪ್ಪ ಹೊಸಳ್ಳಿ, ರಾಮಣ್ಣ ಜಕ್ಕಲಿ, ದೇವಪ್ಪ ಚಿಕ್ಕಹಂದಿಗೋಳ, ಹೊನ್ನಪ್ಪ ಒಡ್ಡರ, ಯಲ್ಲಪ್ಪ ಕೋರದಾಳ, ನೀಲಪ್ಪ ಗಡಗಿ, ಹುಸೇನಸಾಬ ಹೊಂಬಳ, ಬಾಲಪ್ಪ ನರಗುಂದ, ಈರಪ್ಪ ಸಲಗಾರ, ಬಸಪ್ಪ ಸೊರಟೀರ, ರುದ್ರಪ್ಪ ಏಣಗಿ, ನಾಗಪ್ಪ ಪೂಜಾರ, ಮಂಜುನಾಥ ಪೂಜಾರ, ನಾಗಪ್ಪ ತಳವಾರ, ಗೌಸಿದ್ದಪ್ಪ ಹಳ್ಳಾಕಾರ, ಬಸಪ್ಪ ಕರಿಗಾರ, ಮಹಮ್ಮದಸಾಬ ಗಚ್ಚಿನಮನಿ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಪೈಲ್ವಾನರು ಉಪಸ್ಥಿತರಿದ್ದರು.

ಟಿಆರ್ ಮಲ್ಲಿಕಾರ್ಜುನ ಗೌಡನ್ನವರ ಕಾರ್ಯಕ್ರಮ ನಿರೂಪಿಸಿದರು.

---

## ಅಂಗನವಾಡಿ ನೌಕರರ ಸಂಘಕ್ಕೆ ನೂತನ ಪದಾಧಿಕಾರಿಗಳು



**ವಿಜಯಸಾಕ್ಷಿ ಸುದ್ದಿ, ಡಂಬಳ**

ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಿಐಟಿಯು ಸಂಘಟನೆಯ ಮುಂಡರಗಿ ತಾಲೂಕು ಮಟ್ಟದ ಸಮ್ಮೇಳನದಲ್ಲಿ ನೂತನ ತಾಲೂಕು ಸಮಿತಿಯನ್ನು ರಚಿಸಲಾಯಿತು.

ನೂತನ ಅಧ್ಯಕ್ಷೆಯಾಗಿ ಡಂಬಳ ಗ್ರಾಮದ ಸುಶೀಲಾ ಶಿವಾನಂದ ಛಲವಾದಿ, ಉಪಾಧ್ಯಕ್ಷೆಯಾಗಿ ಸುಮಂಗಲಾ ಸುರೇಶ ಡಂಬಳ, ಪ್ರಧಾನ ಕಾರ್ಯದರ್ಶಿಯಾಗಿ ಅನ್ನಪೂರ್ಣ ಸಾಲಿಮಠ ಹಾಗೂ ಖಜಾಂಚಿಯಾಗಿ ಶಿವಲೀಲಾ ಹೇಮಗಿರಿಮಠ ಆಯ್ಕೆಯಾದರು.

ಮುಖಂಡರಾಗಿ ವಿಶಾಲಾಕ್ಷಿ ಶಂಕರ್ ದೇವರಮನಿ ಹಾಗೂ ಜಯಶ್ರೀ ರಾಮನಗೌಡ್ರ, ಪದಾಧಿಕಾರಿಗಳಾಗಿ ಪ್ರಭಾವತಿ ಕವಲೂರ, ಈರಮ್ಮ ತಂತ್ರಿ, ಸುಜಾತ ಜೋಳದ, ಶೋಭಾ ರುದ್ರಪ್ಪ ಪೂಜಾರ ಹಾಗೂ ಅಕ್ಕಮ್ಮ ಕಟ್ಟೆನ್ನವರ ಆಯ್ಕೆಯಾದರು.

ನೂತನ ಪದಾಧಿಕಾರಿಗಳು ಅಂಗನವಾಡಿ ನೌಕರರ ಸಮಸ್ಯೆಗಳಿಗೆ ಸ್ಪಂದಿಸಿ, ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಮುಂಡರಗಿ ಹಾಗೂ ಡಂಬಳ ಹೋಬಳಿಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಂಘದ ಮುಖಂಡರು ನೂತನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದರು.

---

## ಶಿಕ್ಷಕರನ್ನು ಬೋಧಕೇತರ ಕೆಲಸದಿಂದ ಮುಕ್ತಗೊಳಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರಿಗೆ ಬೋಧನೆಗಿಂತ ಬೋಧಕೇತರ ಕಾರ್ಯಗಳ ಹೊರೆ ಹೆಚ್ಚಾಗುತ್ತಿರುವುದರಿಂದ ಮಾನಸಿಕ ಒತ್ತಡ ಉಂಟಾಗುತ್ತಿದೆ. ಶಿಕ್ಷಕರನ್ನು ಬೋಧಕೇತರ ಕಾರ್ಯಗಳಿಂದ ಮುಕ್ತಗೊಳಿಸಿ, ಬೋಧನೆಗೆ ಮಾತ್ರ ಆದ್ಯತೆ ನೀಡುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಘಟಕದ ನಿಕಟಪೂರ್ವ ಅಧ್ಯಕ್ಷ ಹಾಗೂ ಹಿರಿಯ ರಾಜ್ಯ ಉಪಾಧ್ಯಕ್ಷ ಡಾ. ರವಿ ಎಲ್. ಗುಂಜೀಕರ ಮನವಿ ಮಾಡಿದರು.

ನಗರದ ಸರ್ಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 10ರಲ್ಲಿ ನಡೆದ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗದಗ ಶಹರ ಘಟಕದ ಪದಾಧಿಕಾರಿಗಳ ಪದಗ್ರಹಣ ಹಾಗೂ 'ಗುರು ಸ್ಪಂದನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಶಿಕ್ಷಕರ ಸಮಸ್ಯೆಗಳನ್ನು ಆಲಿಸಿ ಸ್ಪಂದಿಸುವ ವ್ಯವಸ್ಥೆ ರೂಪಿಸಿರುವುದು ಶ್ಲಾಘನೀಯ. ನೂತನ ಪದಾಧಿಕಾರಿಗಳು ಶಿಕ್ಷಕರ ಹಿತಕ್ಕಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದರು.

ರಾಷ್ಟ್ರಪ್ರಶಸ್ತಿ ವಿಜೇತ ನಿವೃತ್ತ ಶಿಕ್ಷಕ ಎಸ್.ಎನ್. ಬಳ್ಳಾರಿ ಅವರು ಶಿಕ್ಷಕರ ಸಂಘಟನೆಗಳ ಕಾರ್ಯವೈಖರಿ ಹಾಗೂ ಪದಾಧಿಕಾರಿಗಳ ಜವಾಬ್ದಾರಿಗಳ ಕುರಿತು ಮಾರ್ಗದರ್ಶನ ನೀಡಿದರು. ಸಂಘದ ಜಿಲ್ಲಾಧ್ಯಕ್ಷ ವಿ.ಎಂ. ಹಿರೇಮಠ ಅವರು ನೂತನ ಪದಾಧಿಕಾರಿಗಳು ಶಿಕ್ಷಕರಿಗೆ ಉತ್ತಮ ಸೇವೆ ನೀಡಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಹರ ಘಟಕದ ತಾಲೂಕು ಅಧ್ಯಕ್ಷ ಎಸ್.ಕೆ. ಮಂಗಳಗುಡ್ಡ ಅವರು ಶಿಕ್ಷಕರ ವಿವಿಧ ಸಮಸ್ಯೆ ಹಾಗೂ ಬೋಧಕೇತರ ಕಾರ್ಯಗಳ ಒತ್ತಡದ ಕುರಿತು ವಿವರಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ರವಿ ಶೆಟ್ಟಪ್ಪನವರ್ ಮಾತನಾಡಿ, 'ಗುರು ಸ್ಪಂದನ'ದ ಮೂಲಕ ಶಿಕ್ಷಕರ ಅಹವಾಲುಗಳನ್ನು ಸ್ವೀಕರಿಸಿ ಹಲವು ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸಲು ಪ್ರಯತ್ನಿಸಲಾಗಿದೆ. ಬಾಕಿ ಸಮಸ್ಯೆಗಳನ್ನು ಶೀಘ್ರ ಪರಿಹರಿಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಕೇಂದ್ರದ ಅಧಿಕಾರಿಗಳು, ಶಿಕ್ಷಕರ ಸಂಘದ ಕಾರ್ಯಕಾರಿ ಸಮಿತಿ ಹಾಗೂ ಸಲಹಾ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

---

## ರಾಜ್ಯದಲ್ಲಿ ಒಂದು ಲಕ್ಷ ಗ್ರಂಥಾಲಯ ಸ್ಥಾಪಿಸುವ ಆಶಯ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯದಾದ್ಯಂತ ಒಂದು ಲಕ್ಷ ಗ್ರಂಥಾಲಯಗಳನ್ನು ಸ್ಥಾಪಿಸುವ ಆಶಯ ಹೊಂದಲಾಗಿದೆ ಎಂದು ಸಾಹಿತಿ ಉಮಾಮಹೇಶ್ವರ ಹೇಳಿದರು.

ಪಟ್ಟಣದ ಎಪಿಎಂಸಿ ಸಮೀಪದ ಸಾಹಿತಿ ಚಿನ್ನಪ್ಪ ಮಲ್ಕಿ ಒಡೆಯರ್ ಅವರ ಮನೆಯಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಹಾಗೂ ವಿಜಯನಗರ ಜಿಲ್ಲಾ ಜಾಗೃತಿ ಸಮಿತಿ ಆಶ್ರಯದಲ್ಲಿ ಆಯೋಜಿಸಿದ್ದ 'ಮನೆಗೊಂದು ಗ್ರಂಥಾಲಯ' ಅನುಷ್ಠಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಾಹಿತ್ಯ ಬೆಳೆಸುವಲ್ಲಿ ವಿಜಯನಗರದ ಅರಸರ ಕೊಡುಗೆ ಹಾಗೂ ವಚನ ಸಾಹಿತ್ಯದ ಸಂರಕ್ಷಕರಾಗಿ ಫ.ಗು. ಹಳಕಟ್ಟಿಯವರ ಸಾಧನೆಗಳನ್ನು ಸ್ಮರಿಸಿದರು.

ಜಿಲ್ಲಾ ಜಾಗೃತಿ ಸಂಚಾಲಕ ಗಣೇಶ್ ಹವಲ್ದಾರ್ ಮಾತನಾಡಿ, ನಗರ, ಜಿಲ್ಲಾ ಹಾಗೂ ಗ್ರಾಮ ಮಟ್ಟದಲ್ಲಿ ಹೆಚ್ಚಿನ ಗ್ರಂಥಾಲಯಗಳು ಸ್ಥಾಪನೆಯಾಗಬೇಕು. ಗ್ರಂಥಾಲಯಗಳು ಮತ್ತು ಅರಿವು ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಕೃಷ್ಣದೇವರಾಯ ವಿಶ್ವವಿದ್ಯಾಲಯದ ಮಾಜಿ ಸಿಂಡಿಕೇಟ್ ಸದಸ್ಯೆ ಪದ್ಮಾ ವಿಠಲ್ ಮಾತನಾಡಿ, ಆಧುನಿಕ ದಿನಗಳಲ್ಲಿ ಮಕ್ಕಳು ಮೊಬೈಲ್‌ಗೆ ಹೆಚ್ಚು ಅವಲಂಬಿತರಾಗುತ್ತಿದ್ದಾರೆ. ಅವರನ್ನು ಮೊಬೈಲ್‌ನಿಂದ ದೂರವಿಟ್ಟು ಓದುವ ಹವ್ಯಾಸ ಬೆಳೆಸುವ ಅಗತ್ಯವಿದೆ. ಓದು ಪ್ರೀತಿಯಿಂದ ಕೂಡಿರಬೇಕು. ಪುಸ್ತಕ ಓದುವುದರಿಂದ ಸ್ವಾಭಾವಿಕ ಸಂತಸ ದೊರೆಯುತ್ತದೆ. ಪುಸ್ತಕ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕು ಎಂದು ಹೇಳಿದರು.

ನಾಟಕ ಅಕಾಡೆಮಿ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತೆ ಮರಿಯಮ್ಮನಹಳ್ಳಿ ಡಾ. ನಾಗರತ್ನ ಮಾತನಾಡಿ, ಬಾಲ್ಯದ ಕಷ್ಟದ ಬದುಕು ಹಾಗೂ ನಾಟಕ ರಂಗ ತಮ್ಮ ಜೀವನದಲ್ಲಿ ತಂದ ಬದಲಾವಣೆಯನ್ನು ಸ್ಮರಿಸಿದರು. ಕಂದಗಲ್ ಹನುಮಂತರಾಯರ ಹಳಗನ್ನಡದ ಮಾತುಗಳನ್ನು ಮನೋಜ್ಞವಾಗಿ ಪ್ರಸ್ತುತಪಡಿಸಿದರು.

ಸಾಹಿತಿ ಸೋ.ದ. ವಿರೂಪಾಕ್ಷಗೌಡ ಮಾತನಾಡಿದರು. ಕಾರ್ಯಕ್ರಮದಲ್ಲಿ ವೇದಿಕೆಯಲ್ಲಿದ್ದ ಗಣ್ಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಚಿನ್ನಪ್ಪ ಮಲ್ಕಿ ಒಡೆಯರ್ ಮಾತನಾಡಿ, ಈ ಕಾರ್ಯಕ್ರಮ ತಮಗೆ ಅತ್ಯಂತ ಸಂತಸ ತಂದಿದೆ ಎಂದರು.

ಹಿರಿಯ ಸಾಹಿತಿ ವಟ್ಟಮ್ಮನಹಳ್ಳಿ ಪಂಪಣ್ಣ, ರಂಗನಾಥ ಹವಲ್ದಾರ್, ಚಿಂತರಪಳ್ಳಿ ಎ.ಎಂ. ರಾಮಪ್ಪ, ಕವಿ ಗಂಡಿ ಮಂಜುನಾಥ, ವಕೀಲ ಬಸವರಾಜ್, ಸಾಹಿತಿ ಓಂಪ್ರಕಾಶ್ ಸೇರಿದಂತೆ ನೂರಾರು ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.

ವಿ.ಬಿ. ಮಲ್ಲೇಶಪ್ಪ ಸ್ವಾಗತಿಸಿದರು. ನಿವೃತ್ತ ಶಿಕ್ಷಕ ರಮೇಶ್ ಪತ್ತಾರ್ ಕಾರ್ಯಕ್ರಮದ ರೂಪುರೇಷೆ ವಿವರಿಸಿದರು. ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಪಿ.ಎಂ. ಶಿಕ್ಷಕ ನಿರೂಪಿಸಿದರು. ಭದ್ರವಾಡಿ ಸುರೇಶ್ ಪ್ರಾರ್ಥಿಸಿದರು.

---

## ಸವಾಲು ಎದುರಿಸಲು ಪ್ಯಾರಾ ಲೀಗಲ್ ಸ್ವಯಂಸೇವಕರಿಗೆ ತರಬೇತಿ




**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ, ತಾಲೂಕು ಹಾಗೂ ಗ್ರಾಮೀಣ ಭಾಗಗಳಲ್ಲಿ ಕಾರ್ಯನಿರ್ವಹಿಸುವ ಪ್ಯಾರಾ ಲೀಗಲ್ ಸ್ವಯಂಸೇವಕರು ಸಮುದಾಯದ ಹಲವು ಸವಾಲುಗಳನ್ನು ಎದುರಿಸುತ್ತಿದ್ದಾರೆ. ಅಂತಹ ಸವಾಲುಗಳನ್ನು ಪರಿಣಾಮಕಾರಿಯಾಗಿ ಎದುರಿಸುವುದು ಹಾಗೂ ಅಗತ್ಯವಿರುವ ಕಾನೂನು ನೆರವು ಮತ್ತು ಸಹಕಾರವನ್ನು ಜನರಿಗೆ ತಲುಪಿಸುವ ಕುರಿತು ತರಬೇತಿ ಪಡೆಯುವುದು ಅಗತ್ಯ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ನಾಗಾವೇಣಿ ಹೇಳಿದರು.

ನಗರದ ಎಡಿಆರ್ ಕಟ್ಟಡದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸೇರಿದಂತೆ ವಿವಿಧ ಇಲಾಖೆಗಳು ಹಾಗೂ ಔಟ್‌ಲಾ ಇಂಡಿಯಾ, ಬೆಂಗಳೂರು ಸಹಯೋಗದಲ್ಲಿ ಸೆ.21ರಿಂದ 22ರವರೆಗೆ ಆಯೋಜಿಸಿರುವ ತರಬೇತಿ ಪಡೆದ ಪ್ಯಾರಾ ಲೀಗಲ್ ಸ್ವಯಂಸೇವಕರ ಎರಡು ದಿನಗಳ ಪುನಶ್ಚೇತನ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಎಂ.ಎ. ಸಂಗನಾಳ ಮಾತನಾಡಿ, ಸ್ವಯಂಸೇವಕರು ತರಬೇತಿಯ ಸದುಪಯೋಗ ಪಡೆದು ಕಾನೂನು ಅರಿವು ಮತ್ತು ತಿಳುವಳಿಕೆಯನ್ನು ಸರಳವಾಗಿ ಸಮುದಾಯಕ್ಕೆ ತಲುಪಿಸಬೇಕು ಎಂದರು. ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಔಟ್‌ಲಾ ಇಂಡಿಯಾದ ಸಂಪನ್ಮೂಲ ವ್ಯಕ್ತಿಗಳು, ಮುಖ್ಯ ಕಾನೂನು ನೆರವು ರಕ್ಷಣಾ ವಕೀಲರಾದ ಜೋಮಿ ಜಾಯ್, ಎಸ್.ವಿ. ಗ್ರಾಮಪುರೋಹಿತ್, ಸಹಾಯಕ ಕಾನೂನು ನೆರವು ರಕ್ಷಣಾ ವಕೀಲ ಗುರುರಾಜ್ ಗೌರಿ ಸೇರಿದಂತೆ ಸ್ವಯಂಸೇವಕರು ಉಪಸ್ಥಿತರಿದ್ದರು.

---

## ರಕ್ತವನ್ನು ಕಾರ್ಖಾನೆಯಲ್ಲಿ ತಯಾರಿಸಲು ಸಾಧ್ಯವಿಲ್ಲ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕಳಸಾಪುರ ರಸ್ತೆಯ ಸಾರಿಗೆ ನಗರದ ಈಶ್ವರ ದೇವಸ್ಥಾನದಲ್ಲಿ ಸಾರಿಗೆ ನಗರ ಯೂತ್ ಅಸೋಸಿಯೇಷನ್, ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ, ನಾಗಾವಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ವಿವಿಧ ವೈದ್ಯಕೀಯ ಸಂಸ್ಥೆಗಳ ಸಹಯೋಗದಲ್ಲಿ ರಕ್ತದಾನ ಮತ್ತು ಎನ್‌ಸಿಡಿ ತಪಾಸಣಾ ಶಿಬಿರ ಯಶಸ್ವಿಯಾಗಿ ನಡೆಯಿತು.

ಶಿಬಿರ ಉದ್ಘಾಟಿಸಿ ಮಾತನಾಡಿದ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್. ಗಡಾದ, ರಕ್ತವನ್ನು ಯಾವುದೇ ಕಾರ್ಖಾನೆಯಲ್ಲಿ ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ. ಮಾನವರಿಂದ ಮಾತ್ರ ರಕ್ತ ಪಡೆಯಲು ಸಾಧ್ಯ. ಒಬ್ಬರ ರಕ್ತ ಮತ್ತೊಬ್ಬರ ಜೀವ ಉಳಿಸುವುದರಿಂದ ರಕ್ತದಾನ ಮಾನವೀಯತೆ ಹಾಗೂ ಸಾಮಾಜಿಕ ಒಗ್ಗಟ್ಟಿನ ಸಂಕೇತವಾಗಿದೆ ಎಂದರು.

18ರಿಂದ 65 ವರ್ಷದೊಳಗಿನ ಆರೋಗ್ಯವಂತರು ವೈದ್ಯಕೀಯ ಮಾರ್ಗದರ್ಶನದಂತೆ ನಿಯಮಿತವಾಗಿ ರಕ್ತದಾನ ಮಾಡಬಹುದು. ಅಪಘಾತ, ಶಸ್ತ್ರಚಿಕಿತ್ಸೆ ಹಾಗೂ ಹೆರಿಗೆ ಸಂದರ್ಭದಲ್ಲಿ ರಕ್ತದ ಅಗತ್ಯವಿರುವವರಿಗೆ ರಕ್ತದಾನ ಜೀವ ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಕ್ಯಾನ್ಸರ್, ಥಲಸೆಮಿಯಾ ಹಾಗೂ ಹಿಮೋಫಿಲಿಯಾ ರೋಗಿಗಳಿಗೂ ನಿರಂತರವಾಗಿ ರಕ್ತದ ಅಗತ್ಯವಿರುತ್ತದೆ ಎಂದು ತಿಳಿಸಿದರು.

ಶಿಬಿರದಲ್ಲಿ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡಾ. ಎನ್. ಅಕ್ಷತಾ, ಬಾಸೆಲ್ ಮಿಷನ್ ಆಸ್ಪತ್ರೆಯ ಡಾ. ಅರುಣಿ, ಚರ್ಮರೋಗ ತಜ್ಞೆ ಡಾ. ಸರೋಜಾ ಪಾಟೀಲ, ಡಾ. ರಾಘು ಹಾಗೂ ಡಾ. ಚಂದ್ರಹಾಸ್ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ನಡೆಸಿದರು. ಆರೋಗ್ಯ ಸುರಕ್ಷತಾ ಅಧಿಕಾರಿ ಶಾಮುವೆಲ್ ಕರಡಿಗುಡ್ಡ ಸ್ವಾಗತಿಸಿದರು. ಬಸವರಾಜ ಲಾಲಗಟ್ಟಿ ಅವರು ಎಚ್‌ಐವಿ ಸ್ಥಿತಿ ತಿಳಿಯಲು ಕ್ಯೂಆರ್ ಕೋಡ್ ಮೂಲಕ ಸ್ವಯಂ ಪರೀಕ್ಷೆ ನಡೆಸುವ ವಿಧಾನವನ್ನು ಪ್ರಾತ್ಯಕ್ಷಿಕೆಯ ಮೂಲಕ ವಿವರಿಸಿದರು.

ಸಾರಿಗೆ ನಗರ ಯೂತ್ ಅಸೋಸಿಯೇಷನ್ ಪದಾಧಿಕಾರಿಗಳು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಮತ್ತು ಮದರ್ ತೆರೇಸಾ ಸ್ಕೂಲ್ ಆಫ್ ನರ್ಸಿಂಗ್ ವಿದ್ಯಾರ್ಥಿನಿಯರು ಶಿಬಿರದಲ್ಲಿ ಸೇವೆ ಸಲ್ಲಿಸಿದರು.

## ಡಿಜೆ ಇಲ್ಲ, ಪಟಾಕಿ ಅಬ್ಬರವಿಲ್ಲ; ಚಕ್ಕಡಿಯಲ್ಲಿ ಸರಳ ವಿಸರ್ಜನೆ

# ಮಳೆಗಾಗಿ ರೈತ ಗಣೇಶನ ಮೊರೆ



ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭೀಕರ ಬರಗಾಲದ ನಡುವೆ ಹಿಂಗಾರು ಮಳೆಯಾದರೂ ಉತ್ತಮವಾಗಿ ಸುರಿದು ರೈತರ ಸಂಕಷ್ಟ ದೂರವಾಗಲಿ ಎಂಬ ಆಶಯದೊಂದಿಗೆ ಲಕ್ಷ್ಮೇಶ್ವರ ಪಟ್ಟಣದ ಬಸ್ತಿಬಣದ ಅನ್ನದಾತರು, ಹಿರಿಯರು, ಯುವಕರು ಹಾಗೂ ಮಹಿಳೆಯರು ಪ್ರತಿಷ್ಠಾಪಿಸಿದ್ದ ರೈತ ಗಣೇಶನಿಗೆ ಒಂಬತ್ತನೇ ದಿನ ಸರಳವಾಗಿ ವಿಸರ್ಜನೆ ನೆರವೇರಿಸಲಾಯಿತು.

ಬಸ್ತಿಬಣದ ಗಜಾನನ ಯುವ ಗೆಳೆಯರ ಬಳಗದ ವತಿಯಿಂದ ಪ್ರತಿಷ್ಠಾಪಿಸಿದ್ದ ರೈತ ಗಣೇಶನ ವಿಸರ್ಜನಾ ಮೆರವಣಿಗೆಗೆ ಕುಂದಗೋಳ ಕಲ್ಯಾಣಪುರ ಮಠದ ಅಭಿನವ ಬಸವಣ್ಣಜ್ಜನವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜಗತ್ತಿನ ಬದುಕಿಗೆ ಕೃಷಿಯೇ ಆಧಾರ. ರೈತರು ಕೃಷಿಯಲ್ಲಿ ಕಷ್ಟಪಟ್ಟು ದುಡಿಯುತ್ತಿದ್ದರೂ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಸೂಕ್ತ ಬೆಲೆ ಹಾಗೂ ಉತ್ತಮ ಫಸಲು ದೊರೆಯದೆ ಸಂಕಷ್ಟ ಎದುರಿಸುತ್ತಿದ್ದಾರೆ. ಅದರಲ್ಲೂ ಈ ಬಾರಿ ಭೀಕರ ಬರಗಾಲ ರೈತರನ್ನು ಮತ್ತಷ್ಟು ಘಾಸಿಗೊಳಿಸಿದೆ ಎಂದರು.

ರೈತರ ಸಂಕಷ್ಟ ನಿವಾರಣೆಯಾಗಲಿ, ಹಿಂಗಾರು ಮಳೆ ಉತ್ತಮವಾಗಿ ಸುರಿದು ಉತ್ತಮ ಫಸಲು ಬರಲಿ ಎಂಬ ಆಶಯದಿಂದ ರೈತ ಸಮುದಾಯ ರೈತ ಗಣೇಶನನ್ನು ಪ್ರತಿಷ್ಠಾಪಿಸಿ ನಿತ್ಯ ಪೂಜೆ, ಭಜನೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಿದೆ. ರೈತರ ಬದುಕಿನಲ್ಲಿ ಮತ್ತೆ ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಲಾಗಿದೆ ಎಂದರು.

ರೈತ ಗಣೇಶನ ವಿಸರ್ಜನಾ ಮೆರವಣಿಗೆಯಲ್ಲಿ ಡಿಜೆ ಸದ್ದು, ಪಟಾಕಿ ಅಬ್ಬರ ಇರಲಿಲ್ಲ. ಗಣೇಶನ ಮೂರ್ತಿಯನ್ನು ಸಾಂಪ್ರದಾಯಿಕವಾಗಿ ಚಕ್ಕಡಿಯಲ್ಲಿ ಇರಿಸಿ ಸರಳವಾಗಿ ವಿಸರ್ಜನಾ ಸ್ಥಳಕ್ಕೆ ಕೊಂಡೊಯ್ಯಲಾಯಿತು.

ರೈತರು, ಯುವಕರು ಹಾಗೂ ಮಹಿಳೆಯರು ಪಾಲ್ಗೊಂಡಿದ್ದ ಸರಳ ಮತ್ತು ಅರ್ಥಪೂರ್ಣ ಮೆರವಣಿಗೆ ಸಾರ್ವಜನಿಕರ ಗಮನ ಸೆಳೆಯಿತು.

ಸಮಗ್ರ ರೈತಪರ ಸಂಘಟನೆಗಳ ಒಕ್ಕೂಟದ ತಾಲೂಕು ಅಧ್ಯಕ್ಷ ಮಂಜುನಾಥ ಮಾಗಡಿ, ರೈತ ಮುಖಂಡರಾದ ಟಾಕಪ್ಪ ಸಾತಪುತೆ, ಬಸವರಾಜ ಓದುನವರ, ಅಶೋಕ ನಿರಾಲೋಟ, ಮಹಾದೇವಪ್ಪ ಅಣ್ಣಿಗೇರಿ, ನಾಗರಾಜ ಚಿಂಚಲಿ, ಮಹೇಶ ಹೊಗೆಸೊಪ್ಪಿನ, ಹೊನ್ನಪ್ಪ ಒಡ್ಡರ, ಬಸವರಾಜ ಟೊಕಾಳಿ, ರಾಜು ಪುಟಾಣಿ, ನಾಗಪ್ಪ ಉಮಚಗಿ, ವೀರಭದ್ರಯ್ಯ ಹಿರೇಮಠ, ಮಹಾಂತೇಶ ಉಮಚಗಿ, ಶಿವಾನಂದ ಲಿಂಗಶೆಟ್ಟಿ, ಪ್ರಕಾಶ ಮೆಣಸಿನಕಾಯಿ, ಬಸವರಾಜ ಕೋಲಕಾರ, ಶಿವಣ್ಣ ಇಟ್ಟಿಗೇರಿ, ಮಂಜುನಾಥ ಮಂಟಗಣಿ, ಮನೋಜ ಓದುನವರ, ಮಧು ಓದುನವರ, ಖಾನಸಾಬ ಸೂರಣಗಿ ಸೇರಿದಂತೆ ಯುವಕರು ಹಾಗೂ ಮಹಿಳೆಯರು ಪಾಲ್ಗೊಂಡಿದ್ದರು.

### ರೈತ ಗೀತೆ, ಚನ್ನಮ್ಮ-ರೈತನ ವೇಷಕ್ಕೆ ಮೆಚ್ಚುಗೆ

ದಾರಿಯುದ್ದಕ್ಕೂ ರೈತ ಗಣೇಶನಿಗೆ ಪುಷ್ಪವೃಷ್ಟಿ ಮಾಡಲಾಯಿತು. 'ಗಣೇಶ ಭಗವಾನ್ ಕೀ ಜೈ', 'ಜೈ ಜವಾನ್, ಜೈ ಕಿಸಾನ್' ಘೋಷಣೆಗಳು ಹಾಗೂ ರೈತ ಗೀತೆಗಳು ಮೆರವಣಿಗೆಯುದ್ದಕ್ಕೂ ಮೊಳಗಿದವು. ವೀರರಾಣಿ ಕಿತ್ತೂರು ಚನ್ನಮ್ಮ ಹಾಗೂ ರೈತನ ವೇಷ ಧರಿಸಿದ್ದ ಮಕ್ಕಳು ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಿದ್ದು, ಸಾರ್ವಜನಿಕರ ಗಮನ ಸೆಳೆದರು.

## ಗಜಾನನೋತ್ಸವದ ಎಂಟನೇ ದಿನ ವಿವಿಧ ಕಾರ್ಯಕ್ರಮ



ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಾನಯೋಗಿ ಶ್ರೀ ಪಂ. ಪಂಚಾಕ್ಷರ ಗವಾಯಿಗಳ ಎಪಿಎಂಸಿ ಪ್ರಾಂಗಣದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಆಯೋಜಿಸಿರುವ ಗಣೇಶೋತ್ಸವದ ಎಂಟನೇ ದಿನ ವಿವಿಧ ಧಾರ್ಮಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಬೆಳಿಗ್ಗೆ ಗಣೇಶ ಹಾಗೂ ಸತ್ಯನಾರಾಯಣ ದೇವರಿಗೆ ವಿಶೇಷ ಪೂಜೆ ಮತ್ತು ಮಹಾಮಂಗಳಾರತಿ ನೆರವೇರಿಸಲಾಯಿತು. ಸಾರ್ವಜನಿಕರು ಹಾಗೂ ವರ್ತಕರ ಕಲ್ಯಾಣಕ್ಕಾಗಿ ಸತ್ಯನಾರಾಯಣ ಪೂಜೆ ನಡೆಸಲಾಗಿದ್ದು, ನೂರಾರು ಭಕ್ತರು ಪಾಲ್ಗೊಂಡರು. ಪೂಜಾ ವಿಧಿವಿಧಾನಗಳನ್ನು ಶಂಭುಲಿಂಗಯ್ಯ ಹಿರೇಮಠ ನೆರವೇರಿಸಿದರು. ಸಂಗೀತ ಸಾಹಿತ್ಯ ಯೋಗಿ ಡಾ. ಪಂ. ಪುಟ್ಟರಾಜ ಗವಾಯಿಗಳ 16ನೇ ಪುಣ್ಯಸ್ಮರಣೆಯ ಅಂಗವಾಗಿ ಮಹಾ ಅನ್ನಸಂತರ್ಪಣೆ ಆಯೋಜಿಸಲಾಗಿತ್ತು. ಸಾವಿರಾರು ಭಕ್ತರು, ರೈತರು ಹಾಗೂ ಸಾರ್ವಜನಿಕರು ಮಹಾಪ್ರಸಾದ ಸ್ವೀಕರಿಸಿದರು.

ಇದೇ ಸಂದರ್ಭದಲ್ಲಿ ಬೃಹತ್ ರಕ್ತದಾನ ಶಿಬಿರ ಆಯೋಜಿಸಲಾಗಿದ್ದು, ಯುವಕರು, ವರ್ತಕರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ರಕ್ತದಾನ ಮಾಡಿದರು.

ಸಂಜೆ ಗದಗಿನ ಚಾಲುಕ್ಯ ಮಲ್ಲಕಂಬ ಅಕಾಡೆಮಿ ವತಿಯಿಂದ ಮಲ್ಲಕಂಬ ಪ್ರದರ್ಶನ ನಡೆಯಿತು. ಪಟುಗಳು ಪ್ರದರ್ಶಿಸಿದ ಸಾಹಸಮಯ ಯೋಗಾಸನ ಹಾಗೂ ಕಸರತ್ತುಗಳು ಪ್ರೇಕ್ಷಕರ ಗಮನ ಸೆಳೆದವು. ಟ್ರಸ್ಟ್ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವಾಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ ಸೇರಿದಂತೆ ಪದಾಧಿಕಾರಿಗಳು, ರೈತರು, ವರ್ತಕರು, ಹಮಾಲರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಕಾಳಿಕಾ ಸಮುದಾಯ ಭವನದಲ್ಲಿ ವಿಶ್ವಕರ್ಮ ಮಹೋತ್ಸವ



ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ನಗರದ ಕಾಳಿಕಾ ಸಮುದಾಯ ಭವನದಲ್ಲಿ ವಿಶ್ವಕರ್ಮ ಸಮಾಜದ ಶ್ರೀ ಕಾಳಿಕಾ ದೇವಸ್ಥಾನ ಟ್ರಸ್ಟ್ ಕಮಿಟಿ, ಶರನ್ನವರಾತ್ರಿ ಉತ್ಸವ ಸಮಿತಿ ಹಾಗೂ ವಿಶ್ವಕರ್ಮ ಗಾಯತ್ರಿ ಮಹಿಳಾ ಮಂಡಳ ಸಹಯೋಗದಲ್ಲಿ ವಿಶ್ವಕರ್ಮ ಮಹೋತ್ಸವ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನಿರ್ದೇಶಕ (ಅಭಿವೃದ್ಧಿ) ಕೆ.ಡಿ. ಬಡಿಗೇರ ಮಾತನಾಡಿ, ದೇವಾಲಯಗಳು, ಅರಮನೆಗಳು, ಸ್ಮಾರಕಗಳು, ಮೂರ್ತಿಗಳು ಹಾಗೂ ವಿವಿಧ ಕಲಾಕೃತಿಗಳ ನಿರ್ಮಾಣದಲ್ಲಿ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ. ಧಾರ್ಮಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಗಳಿಗೆ ಪ್ರತಿಯೊಬ್ಬರೂ ತನು, ಮನ, ಧನದಿಂದ ಸೇವೆ ಸಲ್ಲಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಎನ್.ಐ. ಪತ್ತಾರ ಹಾಗೂ ಅಧ್ಯಕ್ಷ ಶ್ರೀಧರ ಕೊಣ್ಣೂರ ಮಾತನಾಡಿ, ವಿಶ್ವಕರ್ಮ ಮಹೋತ್ಸವವನ್ನು ಸಮಾಜದವರು ಒಗ್ಗೂಡಿ ಅರ್ಥಪೂರ್ಣವಾಗಿ ಆಚರಿಸಿರುವುದು ಸಂತಸ ತಂದಿದೆ. ಕಾಳಿಕಾ ದೇವಸ್ಥಾನದಲ್ಲಿ ನಡೆಯುವ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಆಗಮಿಸಿ ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.

ಡೈಟ್ ಉಪನ್ಯಾಸಕ ಜಿ.ಡಿ. ದಾಸರ ಹಾಗೂ ಗದಗ ಗ್ರಾಮೀಣ ಬಿಇಓ ಕಚೇರಿ ಶಿಕ್ಷಣ ಸಂಯೋಜಕ ಬಿ.ವೈ. ಡೊಳ್ಳಿನ ಮಾತನಾಡಿ, ನಾಡಿನ ಕರಕುಶಲ ಕಲೆ ಮತ್ತು ನಿರ್ಮಾಣ ಕ್ಷೇತ್ರಕ್ಕೆ ವಿಶ್ವಕರ್ಮರ ಕೊಡುಗೆ ಮಹತ್ವದ್ದಾಗಿದೆ ಎಂದರು.

ಈ ಸಂದರ್ಭದಲ್ಲಿ ವಿಶ್ವಕರ್ಮ ಸಮಾಜದ ಹಿರಿಯರು, ಟ್ರಸ್ಟ್ ಪದಾಧಿಕಾರಿಗಳು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು. ಶ್ರೀ ಕಾಳಿಕಾ ಸೇವಾಭೂಷಣ ಪ್ರಶಸ್ತಿ ಪುರಸ್ಕೃತ ಶಿವಲೀಲಾ ಕೆ. ಬಡಿಗೇರ ಸೇರಿದಂತೆ ಸಮಾಜದ ಮುಖಂಡರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

## ಗಜಾನನ ಉತ್ಸವದಲ್ಲಿ ರಂಗೋಲಿ, ವೇಷಭೂಷಣ ಸ್ಪರ್ಧೆ

ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಎಸ್‌ಕೆ ತರುಣ ಸಂಘ (ರಿ.) ಗದಗ ಹಾಗೂ ಗಜಾನನ ಉತ್ಸವ ಸಮಿತಿ ವತಿಯಿಂದ ಸೆ. 19ರಂದು ಮಹಿಳೆಯರು ಹಾಗೂ ಮಕ್ಕಳಿಗಾಗಿ ರಂಗೋಲಿ ಮತ್ತು ವೇಷಭೂಷಣ ಸ್ಪರ್ಧೆ ಆಯೋಜಿಸಲಾಗಿತ್ತು.

ಬೆಳಿಗ್ಗೆ 11.30ರಿಂದ ಮಧ್ಯಾಹ್ನ 1.30ರವರೆಗೆ ನಡೆದ ರಂಗೋಲಿ ಸ್ಪರ್ಧೆಯಲ್ಲಿ ಮಹಿಳೆಯರು ಹಾಗೂ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡರು. ಚುಕ್ಕಿ ರಂಗೋಲಿ, ಸಂಸ್ಕಾರ ಭಾರತಿ ರಂಗೋಲಿ ಹಾಗೂ ಕಿರಿಯ ಬಾಲಕಿಯರ ರಂಗೋಲಿ ವಿಭಾಗಗಳಲ್ಲಿ ಸ್ಪರ್ಧೆಗಳು ನಡೆದವು. ಎಎಸ್‌ಎಸ್ ಕಾಲೇಜಿನ ಉಪನ್ಯಾಸಕರಾದ ಸುಮನ್ ಪಾಟೀಲ್ (ಕುಲಕರ್ಣಿ) ಹಾಗೂ ರಮ್ಯಾ ಪೂಜಾರ್ ತೀರ್ಪುಗಾರರಾಗಿ ಭಾಗವಹಿಸಿದ್ದರು.

ವಿವಾಹಿತ ಮಹಿಳೆಯರಿಗಾಗಿ ಆಯೋಜಿಸಿದ್ದ ವೇಷಭೂಷಣ ಸ್ಪರ್ಧೆಯಲ್ಲೂ ಮಹಿಳೆಯರು ಸಾಂಪ್ರದಾಯಿಕ ಅಲಂಕಾರದಲ್ಲಿ ಪಾಲ್ಗೊಂಡು ಗಮನ ಸೆಳೆದರು.

ವೇಷಭೂಷಣದಲ್ಲಿ ಪ್ರೀತಿ ಮೆಹರವಾಡೆ, ಸ್ನೇಹಲತಾ ಕಬಾಡಿ, ಕಸ್ತೂರಬಾಯಿ ಭಾಂಡಗೆ ಹಾಗೂ ಸುಮನ್ ಖಟವಟೆ ಬಹುಮಾನ ಪಡೆದರು. ಚುಕ್ಕಿ ರಂಗೋಲಿಯಲ್ಲಿ ಸುಜಾತಾ ಹಬೀಬ್, ಸಂಗೀತಾ ಹಬೀಬ್ ಹಾಗೂ ರೂಪಾ ಪವಾರ್ ಕ್ರಮವಾಗಿ ಬಹುಮಾನ ಪಡೆದರು. ಸಂಸ್ಕಾರ ಭಾರತಿ ರಂಗೋಲಿ ಯಲ್ಲಿ ಅಮೃತಾ ಮೆಹರವಾಡೆ ಹಾಗೂ ಶ್ರೇಯಾ ಮೆಹರವಾಡೆ, ಕಿರಿಯ ಬಾಲಕಿಂ-ುರ ವಿಭಾಗದಲ್ಲಿ ರಚನಾ ಪವಾರ್, ವೈಷ್ಣವಿ ಮೆಹರ ವಾಡೆ ಹಾಗೂ ಶ್ರೀಶಾ ಮೆಹರವಾಡೆ ಬಹುಮಾನ ಪಡೆದರು.

## ಬೀರಲಿಂಗೇಶ್ವರ ಸನ್ನಿಧಿಯಲ್ಲಿ ವಿರಾಜಮಾನನಾದ ಶ್ರೀ ಗಣೇಶ



ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ಶ್ರೀ ಬೀರಲಿಂಗೇಶ್ವರ ದೇವಸ್ಥಾನದಲ್ಲಿ ಪ್ರತಿಷ್ಠಾಪಿಸಲಾಗಿರುವ ಶ್ರೀ ಗಣೇಶ ಮೂರ್ತಿ ಭಕ್ತರ ಗಮನ ಸೆಳೆಯುತ್ತಿದೆ.

ಗಣೇಶೋತ್ಸವದ ಅಂಗವಾಗಿ ವಿಶೇಷ ಅಲಂಕಾರ ಹಾಗೂ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಗುತ್ತಿದ್ದು, ಭಕ್ತರು ಶ್ರದ್ಧಾ-ಭಕ್ತಿಯಿಂದ ಗಣೇಶನ ದರ್ಶನ ಪಡೆಯುತ್ತಿದ್ದಾರೆ.

## ಹೈವೋಲ್ಟೇಜ್ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಕಾರು

ವಿಜಯಸಾಕ್ಷಿ ಸುದ್ದಿ, ಮಂಗಳೂರು

ಅತಿ ವೇಗವಾಗಿ ಬಂದ ಕಾರೊಂದು ನಿಯಂತ್ರಣ ತಪ್ಪಿ ಹೈವೋಲ್ಟೇಜ್ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಭೀಕರ ಅಪಘಾತ ಸಂಭವಿಸಿದೆ.

ಮಂಗಳೂರಿನ ಮರೋಳಿ ಬಳಿ ರಾಷ್ಟ್ರೀಯ ಹೆದ್ದಾರಿ-73ರಲ್ಲಿ ಈ ಘಟನೆ ನಡೆದಿದೆ.

ಪಡೀಲ್ ಕಡೆಯಿಂದ ಅತಿ ವೇಗವಾಗಿ ಬಂದ ಕಾರು ರಸ್ತೆ ಬದಿಯಲ್ಲಿದ್ದ ಹೈವೋಲ್ಟೇಜ್ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ಜಖಂಗೊಂಡಿದ್ದು, ವಿದ್ಯುತ್ ಕಂಬ ಮುರಿದು ಕಾರಿನ ಮೇಲೆಯೇ ಬಿದ್ದಿದೆ.

ಅಪಘಾತದ ವೇಳೆ ಕಾರಿನಲ್ಲಿದ್ದ ಚಾಲಕ ಹಾಗೂ ಸಹ ಪ್ರಯಾಣಿಕ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅಪಘಾತದ ಭೀಕರ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

## ನಾಯಿ ಕಚ್ಚಿದರೆ ನಿರ್ಲಕ್ಷ್ಯ ಬೇಡ; ತಕ್ಷಣ ಲಸಿಕೆ ಪಡೆಯಿರಿ




ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಾಯಿ ಅಥವಾ ಇತರೆ ಪ್ರಾಣಿಗಳು ಕಚ್ಚಿದಾಗ ನಿರ್ಲಕ್ಷ್ಯ ವಹಿಸದೆ ತಕ್ಷಣ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು. ರೇಬಿಸ್ ಮಾರಕ ರೋಗವಾಗಿದ್ದು, ಸಮಯಕ್ಕೆ ಸರಿಯಾಗಿ ಲಸಿಕೆ ಪಡೆಯುವ ಮೂಲಕ ತಡೆಗಟ್ಟಬಹುದು ಎಂದು ಪಶು ವೈದ್ಯಾಧಿಕಾರಿ ಡಾ. ಎಲ್. ಎಸ್. ಗೌರಿ ಹೇಳಿದರು.

ಕರ್ನಾಟಕ ಸರ್ಕಾರ, ಜಿಲ್ಲಾ ಪಂಚಾಯತ್ ಗದಗ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಸಹಯೋಗದಲ್ಲಿ ನರೇಗಲ್ಲ ಪಶು ಚಿಕಿತ್ಸಾ ಕೇಂದ್ರದ ವತಿಯಿಂದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ರೇಬಿಸ್ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸೋಂಕಿತ ನಾಯಿ, ಬೆಕ್ಕು, ನರಿ, ತೋಳ ಹಾಗೂ ಮುಂಗುಸಿ ಕಚ್ಚುವುದರಿಂದ ಅಥವಾ ತರಚುವುದರಿಂದ ರೇಬಿಸ್ ಹರಡಬಹುದು.

ಪ್ರಾಣಿ ಕಚ್ಚಿದ ತಕ್ಷಣ ಗಾಯವನ್ನು ಕನಿಷ್ಠ 15 ನಿಮಿಷ ಸಾಬೂನು ಹಾಗೂ ಹರಿಯುವ ನೀರಿನಿಂದ ತೊಳೆಯಬೇಕು.

ಗಾಯಕ್ಕೆ ಮಣ್ಣು, ಎಣ್ಣೆ ಅಥವಾ ಯಾವುದೇ ದೇಶಿ ಔಷಧಿ ಹಚ್ಚದೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ ಅಗತ್ಯ ಲಸಿಕೆ ಪಡೆಯಬೇಕು ಎಂದರು.

ಸಾಕು ನಾಯಿಗಳು ಮತ್ತು ಬೆಕ್ಕುಗಳಿಗೆ ನಿಯಮಿತವಾಗಿ ರೇಬಿಸ್ ಲಸಿಕೆ ಹಾಕಿಸಬೇಕು. ಮಕ್ಕಳು ಬೀದಿ ನಾಯಿಗಳನ್ನು ಕೆಣಕುವುದು, ಅವುಗಳೊಂದಿಗೆ ಆಟವಾಡುವುದು ಹಾಗೂ ಪರಿಚಯವಿಲ್ಲದ ಪ್ರಾಣಿಗಳನ್ನು ಮುಟ್ಟುವುದನ್ನು ತಪ್ಪಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕಿ ಶಾರದಾ ಎಂ., ಶಿಕ್ಷಕರಾದ ವಿ.ವಿ. ಅಣ್ಣಿಗೇರಿ, ಆರ್.ಡಿ. ಬಡಿಗೇರ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಗಜೇಂದ್ರಗಡ: ತಾಲೂಕಿನ ಮುಶಿಗೇರಿ ಗ್ರಾಮದಲ್ಲಿ ಶರಣಬಸವೇಶ್ವರ ಭಜನಾ ಮಂಡಳಿ ವತಿಯಿಂದ ಸೋಮವಾರ ಆಯೋಜಿಸಿದ್ದ ಭಜನಾ ಮುಕ್ತಾಯ ಕಾರ್ಯಕ್ರಮದಲ್ಲಿ ನಿವೃತ್ತ ನೌಕರರನ್ನು ಸನ್ಮಾನಿಸಲಾಯಿತು. ಪ್ಯಾಟಿಯ ಧರ್ಮರ ಮಠದ ಸಂಕ್ರಪ್ಪಜ್ಜನವರು ನಿವೃತ್ತ ನೌಕರರನ್ನು ಸನ್ಮಾನಿಸಿದರು. ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರಾಜಶೇಖರ ಮಾಲಗಿತ್ತಿ, ಎಂ.ಎ. ಹಾದಿಮನಿ, ಮೌನೇಶ ಅಕ್ಕಸಾಲಿಗರ, ಈರಣ್ಣ ಮ್ಯಾಗೇರಿ ಹಾಗೂ ವೀರೇಶ ಕಿತ್ತೂರು ಉಪಸ್ಥಿತರಿದ್ದರು.

## ಭಕ್ತಿಗೀತೆಗಳ ಆಲ್ಬಮ್ ಬಿಡುಗಡೆ



ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೀರ್ತನ ಮೂವಿ ಮೇಕರ್ಸ್ ವತಿಯಿಂದ ಶ್ರೀದೇವಿ ಎಲ್ಲಮ್ಮ, ಶ್ರೀದೇವಿ ಲಕ್ಷ್ಮಿ ಹಾಗೂ ಶ್ರೀದೇವಿ ದುರ್ಗೆಯ ಮಹಿಮೆ ಸಾರುವ ವಿಶೇಷ ವಿಡಿಯೋ ಆಲ್ಬಮ್ ಶೀಘ್ರದಲ್ಲೇ ಬಿಡುಗಡೆಯಾಗಲಿದೆ.

ಬೆಂಗಳೂರಿನ ಸುತ್ತಮುತ್ತಲಿನ ವಿವಿಧ ಪ್ರದೇಶಗಳಲ್ಲಿ ಐದು ದಿನಗಳ ಕಾಲ ಆಲ್ಬಮ್‌ನ ಚಿತ್ರೀಕರಣ ನಡೆದಿದ್ದು, ಮೂರು ದೇವತೆಗಳ ಪಾತ್ರಗಳಲ್ಲಿ ಕಿರುತೆರೆ ಹಾಗೂ ಚಲನಚಿತ್ರ ಕಲಾವಿದೆ ಸುನಂದಾ ಕಲ್ಬುರ್ಗಿ, ನಮ್ರತಾ ಎನ್. ಕುಲಕರ್ಣಿ ಹಾಗೂ ಗೀತಾ ವೆಂಕಟೇಶ್ ಅಭಿನಯಿಸಿದ್ದಾರೆ.

ಬೆಟ್ಟೇಗೌಡ ಕಿಲಾರ ಛಾಯಾಗ್ರಹಣ, ಲೋಕೇಶ್ ವಿದ್ಯಾಧರ ಹಾಗೂ ನಾರಾಯಣ್ ಸಾಹಿತ್ಯ, ಎಸ್.ಕೆ. ಸಾಯಿ ಶ್ಯಾಮ್ (ರಿದಂ ಕುಟ್ಟಿ) ಸಂಗೀತ, ಅನಿತಾ ನಾರಾಯಣ ಕುಲಕರ್ಣಿ ಹಿನ್ನೆಲೆ ಗಾಯನ, ಶಾಂತಿ ಹಾಗೂ ದೀಪಾ ನೃತ್ಯ ಸಂಯೋಜನೆ ಮಾಡಿದ್ದಾರೆ. ಪಲ್ಲವಿ ಹಾಗೂ ಭಾಗ್ಯಮ್ಮ ವರ್ಣಾಲಂಕಾರ ಮತ್ತು ಕೇಶಾಲಂಕಾರ, ರೋಹಿತ್ ವಸ್ತ್ರಾಲಂಕಾರ, ಯುವರಾಜ್ ಸಂಕಲನ ಹಾಗೂ ಜೀವನ್ ಡಿ.ಐ. ಕಾರ್ಯ ನಿರ್ವಹಿಸಿದ್ದಾರೆ. ಚಿತ್ರ ನಿರ್ದೇಶಕ ಹಾಗೂ ನಿರ್ಮಾಪಕ ಲೋಕೇಶ್ ವಿದ್ಯಾಧರ ನಿರ್ದೇಶನ ಮತ್ತು ನಿರ್ಮಾಣದ ಹೊಣೆ ಹೊತ್ತಿದ್ದಾರೆ. ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ್ ಹಂಡಿಗಿ ಪತ್ರಿಕಾ ಸಂಪರ್ಕ ನಿರ್ವಹಿಸಿದ್ದಾರೆ. ನಾಡಿನ ಸಂಸ್ಕೃತಿ ಹಾಗೂ ಭಕ್ತಿಯ ಸೊಗಡನ್ನು ಜನಮನಗಳಿಗೆ ತಲುಪಿಸುವ ಉದ್ದೇಶದಿಂದ ಆಲ್ಬಮ್ ಸಿದ್ಧಪಡಿಸಲಾಗಿದ್ದು, ಶೀಘ್ರದಲ್ಲೇ ಬಿಡುಗಡೆಯಾಗಲಿದೆ ಎಂದು ಕೀರ್ತನ ಮೂವಿ ಮೇಕರ್ಸ್ ತಿಳಿಸಿದೆ.

## ಉದ್ಯಮಶೀಲತಾ ತರಬೇತಿಯಿಂದ ಸ್ವಾವಲಂಬನೆಗೆ ಪ್ರೇರಣೆ




ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ವತಿಯಿಂದ ಗದಗದಲ್ಲಿ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಆರಂಭಗೊಂಡಿತು.

ಗದಗದ ದಾರಿದೀಪ ವಿವಿಧೋದ್ದೇಶಗಳ ಮಹಿಳಾ ಸಂಸ್ಥೆಯಲ್ಲಿ ನಡೆದ ತರಬೇತಿ ಉದ್ಘಾಟನಾ ಕಾರ್ಯಕ್ರಮವನ್ನು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಎನ್. ಎಸ್. ಕುಲಕರ್ಣಿ ಉದ್ಘಾಟಿಸಿದರು.

ಉದ್ಯಮ ಆರಂಭಿಸಲು ಆಸಕ್ತಿ ಹೊಂದಿರುವವರಿಗೆ ಇಂತಹ ತರಬೇತಿಗಳು ಉಪಯುಕ್ತವಾಗಿದ್ದು, ಉದ್ಯಮಶೀಲರಾಗಲು ಅಗತ್ಯವಾದ ಮಾಹಿತಿ ಹಾಗೂ ಪ್ರೇರಣೆ ನೀಡುತ್ತವೆ. ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಯಶಸ್ವಿ ಉದ್ಯಮಿಯಾದ ಶಕುಂತಲಾ ಮುಳಗುಂದ ಅವರು ತಾವು ಈ ಹಿಂದೆ ಸಿಡಾಕ್‌ನಿಂದ ಪಡೆದ ತರಬೇತಿ ಹಾಗೂ ಪ್ರಸ್ತುತ ನಡೆಸುತ್ತಿರುವ ಶ್ರೀಕ್ಷೇತ್ರ ಹರ್ಬಲ್ ಹೇರ್‌ಕೇರ್ ಮತ್ತು ಫುಡ್ ಪ್ರಾಡಕ್ಟ್ಸ್ ಉದ್ಯಮದ ಕುರಿತು ಮಾಹಿತಿ ಹಂಚಿಕೊಂಡು, ತರಬೇತಿ ಪಡೆದು ಸ್ವಾವಲಂಬಿ ಉದ್ಯಮಿಗಳಾಗುವಂತೆ ಕರೆ ನೀಡಿದರು.

ತರಬೇತಿಯ ಮೊದಲ ದಿನದ ವಿಷಯಗಳನ್ನು ಸಂಪನ್ಮೂಲ ವ್ಯಕ್ತಿ ರಶ್ಮಿ ಶಿರಹಟ್ಟಿ ನಿರ್ವಹಿಸಿದರು.

ಸಿಡಾಕ್ ತರಬೇತುದಾರ ಮಂಜುನಾಥ ಮುಳಗುಂದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ತರಬೇತುದಾರರಾದ ವಿಜಯಲಕ್ಷ್ಮಿ ನೆಲ್ಲೂರ ಉಪಸ್ಥಿತರಿದ್ದರು. ತರಬೇತಿಯಲ್ಲಿ 34 ಶಿಬಿರಾರ್ಥಿಗಳು ಭಾಗವಹಿಸುತ್ತಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka